ಸಂಪುಟ : 10 ಸಂಚಿಕೆ: 120 ಪುಟ : 4+2 ಬೆಲೆ: 3.00 ಶುಕ್ರವಾರ ಜೂನ್ 13 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 120 Pages : 4+2 Price : 3.00 Friday June 13 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ರೋಣ-ನರಗುಂದ ಸಂಪರ್ಕ ಕಡಿತ | ಬೆಣ್ಣೆಹಳ್ಳದ ಸುತ್ತಮುತ್ತಲಿನ ಗ್ರಾಮಸ್ಥರು ಎಚ್ಚರಿಕೆ ವಹಿಸಲು ಸೂಚನೆ

# ಬೆಣ್ಣೆಹಳ್ಳದಿಂದ ಪ್ರವಾಹ ಭೀತಿ



**■ವಿಜಯಸಾಕ್ಷಿ ಸುದ್ದಿ, ಗದಗ**

ಧಾರವಾಡ ಜಿಲ್ಲೆಯ ಕುಂದಗೋಳ, ನವಲಗುಂದ ಮತ್ತು ಜಿಲ್ಲೆಯ ನರಗುಂದ, ರೋಣ ಭಾಗದ ವ್ಯಾಪ್ತಿಯಲ್ಲಿ ಭಾರೀ ಮಳೆಯಾಗಿದ್ದರಿಂದ ಬೆಣ್ಣೆಹಳ್ಳದ ಪ್ರವಾಹ ಭೀತಿ ಎದುರಾಗಿದೆ. ಗುರುವಾರ ತಡರಾತ್ರಿಯೇ ಯಾವಗಲ್ ಗ್ರಾಮದ ಬಳಿಯ ಸೇತುವೆ ಜಲಾವೃತವಾಗಿ, ರೋಣ-ನರಗುಂದ ಸಂಪರ್ಕ ಕಡಿತಗೊಂಡಿದೆ. ಬೆಣ್ಣೆಹಳ್ಳ ಅಪಾಯದ ಮಟ್ಟ ಮೀರಿ ಹರಿಯುತ್ತಿದ್ದು, ಜಿಲ್ಲಾಡಳಿತ ಹೈಅಲರ್ಟ್ ಘೋಷಿಸಿ, ಬೆಣ್ಣೆಹಳ್ಳದ ಸುತ್ತಮುತ್ತಲಿನ ಗ್ರಾಮಸ್ಥರು ಎಚ್ಚರಿಕೆಯಿಂದ ಇರಲು ಸೂಚನೆ ನೀಡಿದೆ.

ಮುಂಗಾರು ಪೂರ್ವದಲ್ಲಿ ಅಬ್ಬರಿಸಿ ಮರೆಯಾಗಿದ್ದ ಮಳೆ ಮತ್ತೊಮ್ಮೆ ಹೊಸ ಅವತಾರ ತಾಳಿ ಪ್ರತ್ಯಕ್ಷವಾಗಿದ್ದು, ಬುಧವಾರ ಹಾಗೂ ಗುರುವಾರ ಅಳತೆಮೀರಿ ಸುರಿದ ಮಳೆಯ ರೌದ್ರಾವತಾರಕ್ಕೆ ಜನಜೀವನ ಅಸ್ತವ್ಯಸ್ತಗೊಂಡಿದೆ.

ಬುಧವಾರ ರಾತ್ರಿಯಿಡೀ ಸುರಿದ ಮಳೆಯಿಂದ ಬೆಟಗೇರಿಯ ಕೆಲ ಬಡಾವಣೆಗಳಲ್ಲಿ ವಿದ್ಯುತ್ ಸಂಪರ್ಕ ಕಡಿತಗೊಂಡಿತ್ತು. ಬೆಟಗೇರಿ ಹಾಗೂ ಗಂಗಿಮಡಿಯ ಕೆಲ ತಗ್ಗಿನ ಪ್ರದೇಶಗಳಿಗೆ ನೀರು ನುಗ್ಗಿತ್ತಲದೇ ರಸ್ತೆಗಳು ಮಳೆ ನೀರಿನಲ್ಲಿ ಮುಳುಗಿದ್ದವು. ಅಲ್ಲದೆ, ರೋಣ, ನರಗುಂದ ಭಾಗದಲ್ಲಿಯೂ ಪ್ರವಾಹ ಭೀತಿ ಸೃಷ್ಟಿಯಾಗಿದ್ದರೆ, ಮುಂಡರಗಿ, ಗಜೇಂದ್ರಗಡ, ಶಿರಹಟ್ಟಿ ಭಾಗದಲ್ಲಿ ಜಿಟಿಜಿಟಿ ಮಳೆ ಜನರನ್ನು ಮುದುರಿಸಿದೆ.

ಜಿಲ್ಲೆಯ ಲಕ್ಷ್ಮೇಶ್ವರ ತಾಲೂಕಿನ ಕುಂದ್ರಳ್ಳಿ ಗ್ರಾಮದ 24 ಹೆಚ್ಚು ಮನೆಗಳಿಗೆ ಮಳೆ ನೀರು ನುಗ್ಗಿದ್ದು,



ರಾತ್ರಿಯಿಡೀ ಜನ ಮಳೆ ನೀರನ್ನು ಹೊರಹಾಕಲು ಹರಸಾಹಸಪಟ್ಟರು. ಮನೆಯಲ್ಲಿನ ದವಸ-ಧಾನ್ಯಗಳು ನೀರು ಪಾಲಾಗಿರುವ ಬಗ್ಗೆ ವರದಿಯಾಗಿದೆ. ತಹಸೀಲ್ದಾರ ವಾಸುದೇವ ಸ್ವಾಮಿ ಸ್ಥಳಕ್ಕೆ ಭೇಟಿ ನೀಡಿ ಸಂತ್ರಸ್ತರ ನೆರವಿಗೆ ಧಾವಿಸಿದ್ದಾರೆ.

ಗದಗ-ಬೆಟಗೇರಿ ಅವಳಿ ನಗರ ಸೇರಿದಂತೆ ಗಜೇಂದ್ರಗಡ, ಮುಂಡರಗಿ, ಶಿರಹಟ್ಟಿ ತಾಲೂಕು ವ್ಯಾಪ್ತಿಯಲ್ಲಿ ಬುಧವಾರ ಸಂಜೆಯಿಂದ ಗುರುವಾರ ಬೆಳಗಿನ ಜಾವದವರೆಗೂ ಜಿಟಿಜಿಟಿ ಮಳೆಯಾಗಿದ್ದು, ಯಾವುದೇ ಹಾನಿ ಸಂಭವಿಸಿಲ್ಲ ಎಂದು ಜಿಲ್ಲಾಡಳಿತ ಮಾಹಿತಿ ನೀಡಿದೆ. ಜೂನ್ 11ರಂದು ಬೆಳಗ್ಗೆ 8.30ರಿಂದ 24 ಗಂಟೆಗಳ ಅವಧಿಯಲ್ಲಿ ಜಿಲ್ಲೆಯಲ್ಲಿ ವಾಡಿಕೆಗಿಂತ ಶೇ. 559ರಷ್ಟು ಹೆಚ್ಚು ಮಳೆಯಾಗಿರುವ ಬಗ್ಗೆ ವರದಿಯಾಗಿದೆ.

> ಜಿಲ್ಲೆಯಲ್ಲಿ ಮುಂದಿನ ಮೂರು ದಿನ ಭಾರೀ ಮಳೆಯ ಮುನ್ಸೂಚನೆಯಿರುವುದರಿಂದ ಆರೆಂಜ್-ಯಲ್ಲೋ ಅಲರ್ಟ್ ಘೋಷಿಸಲಾಗಿದೆ. ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತುರ್ತು ಸಭೆ ನಡೆಸಿ ವಿಪತ್ತು ನಿರ್ವಹಣೆಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ಮಳೆ ಸಂದರ್ಭದಲ್ಲಿ ನದಿ, ಹಳ್ಳದಲ್ಲಿ ಈಜಾಡುವುದು, ಬಟ್ಟೆ ಒಗೆಯುವುದು, ಜಾನುವಾರುಗಳನ್ನು ತೊಳೆಯುವುದನ್ನು ನಿಷೇಧಿಸಿದ್ದಾರೆ. ಗುಡುಗು-ಮಿಂಚು ಸಮಯದಲ್ಲಿ ಸುರಕ್ಷಿತ ಸ್ಥಳದಲ್ಲಿ ನಿಲ್ಲಬೇಕು. ಅಪಾಯಕಾರಿ ಸೇತುವೆಯಲ್ಲಿ ಸಂಚರಿಸುವಾಗ ಎಚ್ಚರಿಕೆ ವಹಿಸಬೇಕೆಂದು ಸೂಚನೆ ನೀಡಿದ್ದಾರೆ.



### ಪ್ರವಾಹಕ್ಕೊಳಗಾಗುವ ಗ್ರಾಮಗಳ ಸಾರ್ವಜನಿಕರ ಸುರಕ್ಷತೆಗೆ ಪ್ರಥಮಾದ್ಯತೆ ವಹಿಸಿ: ಡಿಸಿ

## ಬೆಣ್ಣೆಹಳ್ಳ ಹರಿವಿನ ಗ್ರಾಮಗಳಲ್ಲಿ ಕಟ್ಟೆಚ್ಚರ



**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ಬೆಣ್ಣೆಹಳ್ಳ ಹಾಗೂ ನದಿಯ ಪ್ರವಾಹಕ್ಕೊಳಗಾಗುವ ಗ್ರಾಮಗಳ ಸಾರ್ವಜನಿಕರ ಸುರಕ್ಷತೆಗೆ ಸ್ಥಳೀಯ ಅಧಿಕಾರಿಗಳು ಪ್ರಥಮಾದ್ಯತೆ ನೀಡಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿಯಿಂದ ವಿಡಿಯೋ ಕಾನ್ಫರನ್ಸ್ ಮೂಲಕ ಗುರುವಾರ ಬೆಣ್ಣೆಹಳ್ಳ ಹಾಗೂ ನದಿಯ ಪ್ರವಾಹದಿಂದ ತೊಂದರೆಗೊಳಗಾಗುವ ಗ್ರಾಮಗಳ ಸುರಕ್ಷತೆ ಕುರಿತಂತೆ ತಾಲೂಕಾಡಳಿತದೊಂದಿಗೆ ಪ್ರವಾಹ ಪರಿಸ್ಥಿತಿ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಳೆ ನೀರು ▸▸3ನೇ ಪುಟಕ್ಕೆ

> ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಮಾತನಾಡಿ, ಪ್ರವಾಹ ಪರಿಸ್ಥಿತಿಯನ್ನು ಸಮರ್ಥವಾಗಿ ನಿಭಾಯಿಸಲು ಎಲ್ಲ ಅಧಿಕಾರಿಗಳು ಸನ್ನದ್ಧರಾಗಬೇಕು. ಅಗತ್ಯವಿದ್ದಲ್ಲಿ ಕಾಳಜಿ ಕೇಂದ್ರಗಳನ್ನು ತೆರೆಯಬೇಕು. ಕಾಳಜಿ ಕೇಂದ್ರಗಳಲ್ಲಿ ಅಗತ್ಯಮೂಲಭೂತ ಸೌಲಭ್ಯಗಳು ಇರುವಂತೆ ಪರಿಶೀಲಿಸಬೇಕು. ಸಂದರ್ಭಾನುಸಾರ ಸಾರ್ವಜನಿಕರನ್ನು ಕಾಳಜಿ ಕೇಂದ್ರಗಳಿಗೆ ಸ್ಥಳಾಂತರಿಸಿದಲ್ಲಿ ಆರೋಗ್ಯ ಇಲಾಖೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ತಮ್ಮ ಜವಾಬ್ದಾರಿಗಳನ್ನು ಸಮರ್ಪಕವಾಗಿ ನಿಭಾಯಿಸಬೇಕೆಂದು ಸೂಚಿಸಿದರು.

### 11ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಕುರಿತು ಪೂರ್ವ ಸಿದ್ಧತಾ ಸಭೆ

## ಯೋಗ ದಿನಾಚರಣೆ ವ್ಯವಸ್ಥಿತವಾಗಿ ಆಚರಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಜೂನ್ 21ರಂದು ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಬೆಳಿಗ್ಗೆ 7 ಗಂಟೆಗೆ ಆಚರಿಸಲಾಗುತ್ತಿದ್ದು, ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಯೋಗ ದಿನಾಚರಣೆ ಕುರಿತು ಗುರುವಾರ ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಯೋಗವು ಮನುಷ್ಯನ ದೈಹಿಕ ಹಾಗೂ ಮಾನಸಿಕ ಸದೃಢತೆಗೆ ಸಹಕಾರಿಯಾಗಿದೆ. ಇದು ಮನುಷ್ಯನಲ್ಲಿನ ರೋಗ ನಿರೋಧಕ ಶಕ್ತಿ ಹೆಚ್ಚಿಸುತ್ತದೆ. ಯೋಗದ ನಂತರ ಧ್ಯಾನ, ಶಾಂತಿ ಮಂತ್ರಗಳು ಸಹ ಮನುಷ್ಯನಲ್ಲಿನ ತಾಳ್ಮೆ, ಆಧ್ಯಾತ್ಮಿಕ ಶಕ್ತಿಯನ್ನು ಹೆಚ್ಚಿಸುತ್ತವೆ. ಹೀಗೆ ಅನೇಕ ರೀತಿಯಲ್ಲಿ ಮನುಷ್ಯನ ಆರೋಗ್ಯಕ್ಕೆ ಸಹಕಾರಿಯಾದ ಯೋಗದ ಕುರಿತು ಅರಿವು ಮೂಡಿಸಿ ಮಕ್ಕಳು, ಹಿರಿಯ ನಾಗರಿಕರು ಯೋಗಾಭ್ಯಾಸ ಮಾಡುವಂತೆ ಪ್ರಚುರಪಡಿಸಬೇಕು. ಅಂತಾರಾಷ್ಟ್ರೀಯ ಯೋಗ ದಿನಾಚರಣೆಯಂದು ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಕಡ್ಡಾಯವಾಗಿ ಹಾಜರಿರಬೇಕು. ಶಾಲೆ-ಕಾಲೇಜುಗಳಲ್ಲಿ ಯೋಗದ ಮಹತ್ವದ ಕುರಿತು ಅರಿವು ಮೂಡಿಸುವ ಕಾರ್ಯಕ್ರಮವಾಗಬೇಕು ಎಂದರು.

ಜಿಲ್ಲಾ ಆಯುಷ್ ಅಧಿಕಾರಿ ಡಾ. ಜಯಪಾಲ್ ಸಿಂಗ್ ಪಿ ಸಮೋರೇಕರ್ ಮಾತನಾಡಿ, ಅಂತಾರಾಷ್ಟ್ರೀಯ ಯೋಗ



ದಿನಾಚರಣೆಯಂದು ಸಂಘ-ಸಂಸ್ಥೆಯವರು, ಇಲಾಖೆ ಅಧಿಕಾರಿ, ಸಿಬ್ಬಂದಿಗಳು ಸೇರಿದಂತೆ ಯೋಗಾಸಕ್ತರು ಬೆಳಿಗ್ಗೆ 6.30 ಗಂಟೆಗೆ ಸರಿಯಾಗಿ ಜಿಲ್ಲಾ ಕ್ರೀಡಾಂಗಣದಲ್ಲಿ ಹಾಜರಿರಬೇಕು. ಜಿಲ್ಲೆಯಲ್ಲಿ 11ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಪ್ರಯುಕ್ತ ಜೂನ್ 19ರಂದು ಜಾಗೃತಿ ಜಾಥಾ ಹಮ್ಮಿಕೊಳ್ಳಲಾಗುವುದು. ಅರಣ್ಯ ಮತ್ತು ತೋಟಗಾರಿಕೆ ಇಲಾಖೆಯ ಸಹಯೋಗದೊಂದಿಗೆ ಜಿಲ್ಲೆಯ ತಾಲೂಕು ಹಾಗೂ ಗ್ರಾಮಗಳಲ್ಲಿ ಆಯುರ್ವೇದ ▸▸3ನೇ ಪುಟಕ್ಕೆ

> ಯೋಗ ದಿನಾಚರಣೆ ವ್ಯವಸ್ಥಿತವಾಗಿ ಜರುಗಿಸಲು ಇಲಾಖಾವಾರು ಹೊಣೆಗಾರಿಕೆಗಳನ್ನು ಹಂಚಿಕೆ ಮಾಡಲಾಗಿದೆ. ಸಂಬಂಧಿತ ಇಲಾಖೆಗಳು ತಮಗೆ ಸೂಚಿಸಿದ ಕಾರ್ಯಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ವಿವಿಧ ಇಲಾಖೆ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸುವ ಮೂಲಕ ಯೋಗ ದಿನಾಚರಣೆ ಯಶಸ್ವಿಯಾಗುವಂತೆ ನೋಡಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ನಿರ್ದೇಶಿಸಿದರು.


### ಜಿಲ್ಲಾಡಳಿತದಿಂದ ಸಾರ್ವಜನಿಕರಿಗೆ ಮುನ್ನೆಚ್ಚರಿಕಾ ಸೂಚನೆಗಳು

## ಮಳೆಯ ಸಂದರ್ಭದಲ್ಲಿ ಸುರಕ್ಷಿತವಾಗಿರಿ

**■ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯ ಹವಾಮಾನ ಇಲಾಖೆಯ ವರದಿಯಂತೆ, ಗದಗ ಜಿಲ್ಲೆಯಲ್ಲಿ ಜೂನ್ 13, 15ರಂದು ಆರೆಂಜ್ ಅಲರ್ಟ್ ಹಾಗೂ ಜೂನ್ 14ರಂದು ಯಲ್ಲೋ ಅಲರ್ಟ್ ನೀಡಲಾಗಿದ್ದು, ಇದರಿಂದ ಗದಗ ಜಿಲ್ಲೆಯಲ್ಲಿ ಭಾರಿ ಮಳೆಯಾಗುವ ಸಂಭವ ಇರುತ್ತದೆ. ಸಾರ್ವಜನಿಕರು ಮುನ್ನೆಚ್ಚರಿಕೆಯಿಂದ ಇರುವಂತೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಮಳೆಯಾಗುವ ಸಂದರ್ಭದಲ್ಲಿ ಗುಡುಗು-ಸಿಡಿಲಿನಿಂದಾಗುವ ಅಹಿತಕರ ಘಟನೆಗಳನ್ನು ತಪ್ಪಿಸಲು ಸಾರ್ವಜನಿಕರು ಮನೆಯಲ್ಲಿ ಅಥವಾ ಸುರಕ್ಷಿತ ಸ್ಥಳಗಳಲ್ಲಿರ ಇರಬೇಕು. ಮಳೆಯಾಗುವ ಸಂದರ್ಭದಲ್ಲಿ ನದಿ/ಹಳ್ಳದ/ಕೆರೆ ದಡದಲ್ಲಿ ಬಟ್ಟೆ ತೊಳೆಯುವುದು, ಈಜಾಡುವುದು, ದನಕರುಗಳನ್ನು ಮೆಯಿಸುವುದು ಹಾಗೂ ಅಪಾಯವಿರುವ



ಸೇತುವೆಗಳಲ್ಲಿ ಸಂಚರಿಸುವುದು ಮತ್ತು ಇತರೆ ಚಟುವಟಿಕೆ ನಡೆಸದಂತೆ ಮುನ್ನೆಚ್ಚರಿಕೆಯನ್ನು ತೆಗೆದುಕೊಳ್ಳುವುದು.

ಭಾರೀ ಮಳೆ/ಪ್ರವಾಹ ಸಂದರ್ಭದಲ್ಲಿ ತಗ್ಗು ಪ್ರದೇಶದಲ್ಲಿ ವಾಸವಿದ್ದರೆ, ಸುರಕ್ಷಿತ ಸ್ಥಳಗಳಿಗೆ ತೆರಳಬೇಕು. ಯುವಕರು ಮತ್ತು ಸಾರ್ವಜನಿಕರು ನದಿ/ಹಳ್ಳದ/ಕೆರೆ ದಡಗಳಲ್ಲಿ ಅಪಾಯವಿರುವ ಸೇತುವೆಗಳಲ್ಲಿ ಫೋಟೋ/ಸೆಲ್ಫಿಗಳನ್ನು ತೆಗೆಯದಂತೆ ಮುನ್ನೆಚ್ಚರಿಕೆ ವಹಿಸಬೇಕು.

ನಿರಂತರ ಮಳೆಯಿಂದ ಅಪಾಯವಿರುವ ಮನೆ, ಗೋಡೆ ಇತರೆ ಕಟ್ಟಡಗಳು ಕುಸಿದು ಸಾವು-ನೋವುಗಳು ಸಂಭವಿಸುವ ಸಂದರ್ಭವಿರುವುದರಿಂದ ಸಾರ್ವಜನಿಕರು ಸುರಕ್ಷತೆಯ ದೃಷ್ಟಿಯಿಂದ ಮುನ್ನೆಚ್ಚರಿಕೆಯ ಕ್ರಮಗಳನ್ನು ತೆಗೆದುಕೊಳ್ಳಬೇಕು.

ಸಾರ್ವಜನಿಕರ ಅನುಕೂಲಕ್ಕಾಗಿ ಸಹಾಯವಾಣಿಗಳನ್ನು ತೆರೆಯಲಾಗಿದ್ದು, ಸಾರ್ವಜನಿಕರು ತುರ್ತು ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳ ಕಾರ್ಯಾಲಯದ-08372-239177 ಅಥವಾ 1077 ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ. ಕಾಲಕಾಲಕ್ಕೆ ರಾಜ್ಯ/ ಜಿಲ್ಲಾಡಳಿತ/ ತಾಲೂಕಾಡಳಿತದಿಂದ ನೀಡುವ ಹವಾಮಾನದ ಮುನ್ನೆಚ್ಚರಿಕೆಯನ್ನು ಸಾರ್ವಾಜನಿಕರು ಪಾಲಿಸಬೇಕು ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರಾದ ಸಿ.ಎನ್. ಶ್ರೀಧರ್ ಕೋರಿದ್ದಾರೆ.

### ಹಳ್ಳ-ಕೊಳ್ಳಗಳು ತುಂಬಿ ತಗ್ಗು ಪ್ರದೇಶಗಳಿಗೆ ನುಗ್ಗಿದ ನೀರು

## ಮಳೆರಾಯನ ಅರ್ಭಟ: ನಲುಗಿದ ಜನತೆ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣ ಸೇರಿ ತಾಲೂಕಿನ ಬಹುತೇಕ ಕಡೆ ಬುಧವಾರ ಸಂಜೆ ಮತ್ತು ರಾತ್ರಿ ಸುರಿದ ಅಬ್ಬರದ ಗಾಳಿ-ಮಳೆ ಅನೇಕ ಆವಾಂತರಗಳನ್ನು ಸೃಷ್ಟಿಸಿದೆ. ಪಟ್ಟಣದ ಕೆಲವೆಡೆ ರಾತ್ರಿಯಿಡೀ ಜಾಗರಣೆ ಮಾಡುವಂತಾಗಿತ್ತು. ಹಳ್ಳ-ಕೊಳ್ಳಗಳು ತುಂಬಿ ತಗ್ಗು ಪ್ರದೇಶಗಳಿಗೆ ನೀರು ನುಗ್ಗಿ ಅನಾಹುತ ಸೃಷ್ಟಿಸಿದೆ.

ಪಟ್ಟಣದಲ್ಲಿ ಚರಂಡಿಗಳು ತುಂಬಿ ರಸ್ತೆ ಮೇಲೆಯೇ ಹರಿದು ಅನೇಕ ಕಡೆ ಸಂಚಾರ ಅಸ್ತವ್ಯಸ್ತಗೊಂಡಿತ್ತು. ಕಟ್ಟಿದ್ದ ಚರಂಡಿ, ನಾಲಾವನ್ನು ಮಳೆಯಲ್ಲಿಯೇ ಪುರಸಭೆ ಪೌರ ಕಾರ್ಮಿಕರು ಸ್ವಚ್ಛಗೊಳಿಸಿದರು. ಬುಧವಾರ ಸಂಜೆ 7.30ರ ನಂತರ ಅಬ್ಬರಿಸಿದ್ದು, ಅಲ್ಲಿಂದ ಮಧ್ಯರಾತ್ರಿ ಸುಮಾರು 1 ಗಂಟೆಯವರೆಗೂ ಸುರಿದ ಭಾರೀ ಮಳೆಗೆ ಪಟ್ಟಣದ ಪ್ರಮುಖ ರಸ್ತೆಗಳು ಜಲಾವೃತವಾಗಿ ಕೆರೆಯಂತೆ ರೂಪುಗೊಂಡಿತ್ತು. ಪಟ್ಟಣದ ಶಿಗ್ಲಿ ಕ್ರಾಸ್, ಕಾಮಗಾರಿ ಅರ್ಧಕ್ಕೆ ನಿಂತ ಬಜಾರ ರಸ್ತೆ, ಜೋಳದ ಪೇಟೆ, ಗ್ರಂಥಾಲಯದ ಬಳಿ, ಸೋಮೇಶ್ವರ ದ್ವಾರದ ಹತ್ತಿರ ಅಪಾರ ಪ್ರಮಾಣದಲ್ಲಿ ನೀರು ಹರಿದುಬಂದು ರಸ್ತೆಗಳಲ್ಲಿ ಕೊಳಚೆ ನೀರು ಸಮೇತ ನೀರು ತುಂಬಿಕೊಂಡಿದ್ದು, ವಾಹನ ಸವಾರರು, ಜನರು ಪರದಾಡುವಂತಾಗಿತ್ತು.

ಸುರಿದ ಮಳೆಗೆ ಜಮೀನುಗಳೆಲ್ಲ ನೀರಿನಿಂದ ಆವೃತವಾಗಿವೆಯಲ್ಲದೇ ಬದುವುಗಳು ಒಡೆದಿವೆ. ಕೆರೆ, ಕೃಷಿಹೊಂಡ ತುಂಬಿದ್ದು, ಹಳ್ಳ, ಬಾಂದಾರ ನದಿಯಂತೆ ಭೋರ್ಗರೆದಿವೆ. ಮಳೆರಾಯನ



ಆಗಮನಕ್ಕಾಗಿ ಕಾಯುತ್ತಿದ್ದ ರೈತರು ಜಮೀನುಗಳಲ್ಲಿ ಹದಗೊಳಿಸಿದ್ದ ಕೆಲವೇ ರೈತರು ಬಿತ್ತನೆ ಮಾಡಿದ್ದು, ಎರಡು ದಿನಗಳ ಹಿಂದೆ ಕೆಲವು ರೈತರು ಬಿತ್ತನೆ ಪೂರೈಸಿದ್ದರು. ಹವಾಮಾನ ಇಲಾಖೆ ಇನ್ನೂ 3-4 ದಿನಗಳ ಕಾಲ ಭಾರೀ ಮಳೆಯಾಗುವ ಸೂಚನೆ ನೀಡಿರುವುದು ರೈತರನ್ನು ಚಿಂತೆಗೀಡುಮಾಡಿದೆ. ಪಟ್ಟಣ ಸೇರಿ ತಾಲೂಕಿನ ದೊಡ್ಡೂರ, ಹುಲ್ಲೂರ, ಸೂರಣಗಿ, ಆದ್ರಳ್ಳಿ, ಯತ್ನಳ್ಳಿ, ಅಕ್ಕಿಗುಂದ, ಬಾಲೆಹೊಸೂರ, ಕುದ್ರಳ್ಳಿ, ಬಟ್ಟೂರು, ಪು.ಬಡ್ನಿ, ಸೇರಿ ಅನೇಕ ರಸ್ತೆಗಳ ಸ್ಥಿತಿ ಅಯೋಮಯವಾಗಿದ್ದು, ಅಪಾಯಕಾರಿ ಗುಂಡಿಗಳನ್ನು ಮುಚ್ಚುವಷ್ಟು ವ್ಯವಧಾನವನ್ನಾದರೂ ಸ್ಥಳೀಯ ಜನಪ್ರತಿನಿಧಿಗಳು, ಅಧಿಕಾರಿಗಳು ಮಾಡಬೇಕು ಎಂದು ನಾಗರಿಕರು ಒತ್ತಾಯಿಸಿದ್ದಾರೆ.

> ಪಟ್ಟಣದ ಬಹುತೇಕ ರಸ್ತೆಗಳಲ್ಲಿ ತಗ್ಗು-ಗುಂಡಿಗಳು ತುಂಬಿಕೊಂಡಿದ್ದರಿಂದ ರಸ್ತೆಯಲ್ಲಿ ಬರುವ ಸವಾರರು ಸಮಸ್ಯೆ ಎದುರಿಸುವಂತಾಗಿದೆ. ಅಲ್ಲದೆ ಅನೇಕ ತಗ್ಗು ಪ್ರದೇಶಗಳಲ್ಲಿನ ಮನೆಗಳಿಗೆ ನೀರು ನುಗ್ಗಿ ಜನರು ಪರದಾಡುವಂತಾಗಿದೆ. ವಿದ್ಯುತ್ ವ್ಯತ್ಯಯವೂ ಉಂಟಾಗಿದ್ದು, ಅಕ್ಕಿಗುಂದ, ಬಟ್ಟೂರ, ದೊಡ್ಡೂರ ಮಾರ್ಗದ ಹಳ್ಳಗಳು ಅಪಾಯದ ಮಟ್ಟ ಮೀರಿ ಹರಿದಿವೆ. ಮಳೆಗಾಗಿ ಕಾಯುತ್ತಿದ್ದ ರೈತರಿಗೆ ಈ ಮಳೆ ಕೊಂಚ ನೆಮ್ಮದಿ ತಂದಿದ್ದರೂ ಕೆಲವೆಡೆ ಮಾತ್ರ ಮಳೆಯ ರುದ್ರ ನರ್ತನದಿಂದ ಬೆಚ್ಚಿ ಬೀಳುವಂತಾಗಿದೆ.

## ಸಂಪಾದಕೀಯ

### ಕಳಪೆ ಬೀಜ, ರಸಗೊಬ್ಬರ ಮಾರಾಟ ತಡೆಗೆ ಬೇಕು ಕಠಿಣ ಕ್ರಮ

ದಶಕದಿಂದೀಚೆಗೆ ಅತಿವೃಷ್ಟಿ ಮತ್ತು ಅನಾವೃಷ್ಟಿಯಂತಹ ನೈಸರ್ಗಿಕ ವಿಕೋಪಗಳಿಂದ ಕಂಗೆಟ್ಟಿದ್ದ ನಮ್ಮ ಅನ್ನದಾತರು, ಕಳೆದ ಎರಡು ವರ್ಷಗಳಿಂದ ಉತ್ತಮ ಮುಂಗಾರಿನ ನಿರೀಕ್ಷೆಯಲ್ಲಿದ್ದರು.

ಆದರೆ, ಈ ಆಶಾದಾಯಕ ವಾತಾವರಣದ ನಡುವೆಯೇ ರಾಜ್ಯದಲ್ಲಿ ಕಳಪೆ ಗುಣಮಟ್ಟದ ಬೀಜ ಮತ್ತು ನಕಲಿ ರಸಗೊಬ್ಬರಗಳ ವಿತರಣೆಯು ರೈತರ ಆತಂಕವನ್ನು ಇನ್ನಷ್ಟು ಹೆಚ್ಚಿಸಿದೆ. ಅಲ್ಲಲ್ಲಿ ಕೇಳಿ ಬರುತ್ತಿದ್ದ ಕಳಪೆ ಬೀಜದ ದೂರುಗಳು ಈಗ ನಕಲಿ ರಸಗೊಬ್ಬರದ ಮಾರಾಟದ ರೂಪದಲ್ಲಿ ಗಂಭೀರ ಸ್ವರೂಪ ಪಡೆದಿವೆ. ಪರೀಕ್ಷೆಗೊಳಪಡಿಸಿದಾಗ ನಕಲಿ ಗೊಬ್ಬರ ಎಂಬುದು ಸಾಬೀತಾಗಿರುವುದು ಅತ್ಯಂತ ಕಳವಳಕಾರಿ ಸಂಗತಿ.

ಭಾರತವು ಕೃಷಿ ಪ್ರಧಾನ ದೇಶವಾಗಿದ್ದು, ನಮ್ಮ ಆರ್ಥಿಕತೆಯ ಬೆನ್ನೆಲುಬು ರೈತರು. ಒಂದು ಉತ್ತಮ ಇಳುವರಿಗೆ ಗುಣಮಟ್ಟದ ಬೀಜ ಮತ್ತು ಸಮರ್ಪಕ ರಸಗೊಬ್ಬರಗಳು ಅತ್ಯಗತ್ಯ. ಆದರೆ, ಪ್ರಾಮಾಣಿಕವಾಗಿ ದುಡಿಯುವ ರೈತನ ಶ್ರಮಕ್ಕೆ ಕನ್ನ ಹಾಕುವಂತೆ ನಕಲಿ ಉತ್ಪನ್ನಗಳನ್ನು ಮಾರುಕಟ್ಟೆಗೆ ಬಿಡುವುದು ಅಕ್ಷಮ್ಯ ಅಪರಾಧ. ಕಳಪೆ ಬೀಜ ಬಿತ್ತನೆಯಿಂದ ಮೊಳಕೆ ಒಡೆಯದಿರುವುದು ಅಥವಾ ನಿರೀಕ್ಷಿತ ಬೆಳವಣಿಗೆ ಕಾಣದಿರುವುದು, ನಕಲಿ ರಸಗೊಬ್ಬರ ಬಳಕೆಯಿಂದ ಭೂಮಿಯ ಫಲವತ್ತತೆ ಹಾಳಾಗುವುದರ ಜೊತೆಗೆ ಬೆಳೆಯ ಇಳುವರಿ ಕುಸಿಯುವುದು ರೈತನ ಆರ್ಥಿಕ ಪರಿಸ್ಥಿತಿಯನ್ನು ಇನ್ನಷ್ಟು ಹದಗೆಡಿಸುತ್ತದೆ. ಇದು ಕೇವಲ ಒಂದು ಬೆಳೆಯ ನಷ್ಟವಲ್ಲ, ಬದಲಿಗೆ ರೈತನ ಬದುಕು ಮತ್ತು ಆತ್ಮವಿಶ್ವಾಸದ ಮೇಲಾಗುವ ಪ್ರಹಾರ. ಸರಕಾರ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಬೇಕು. ನಕಲಿ ಬೀಜ ಮತ್ತು ರಸಗೊಬ್ಬರಗಳ ಮಾರಾಟ ಜಾಲವನ್ನು ಬೇರು ಸಹಿತ ಕಿತ್ತೊಗೆಯಲು ತಕ್ಷಣ ಕ್ರಮ ಕೈಗೊಳ್ಳಬೇಕು. ಇದಕ್ಕಾಗಿ ಕೃಷಿ ಇಲಾಖೆ ಮತ್ತು ಸಂಬಂಧಪಟ್ಟ ಪ್ರಾಧಿಕಾರಗಳು ಜಂಟಿಯಾಗಿ ಕಾರ್ಯನಿರ್ವಹಿಸಬೇಕು. ಮಾರುಕಟ್ಟೆಯಲ್ಲಿ ಲಭ್ಯವಿರುವ ಬೀಜ ಮತ್ತು ರಸಗೊಬ್ಬರಗಳ ಗುಣಮಟ್ಟವನ್ನು ನಿಯಮಿತವಾಗಿ ಪರಿಶೀಲಿಸಬೇಕು, ನಕಲಿ ಉತ್ಪನ್ನಗಳನ್ನು ಪತ್ತೆಹಚ್ಚಲು ಕಠಿಣ ತಪಾಸಣೆ ನಡೆಸಬೇಕು. ತಪ್ಪಿತಸ್ಥರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಬೇಕು ಮತ್ತು ಅವರಿಗೆ ಕಠಿಣ ಶಿಕ್ಷೆ ವಿಧಿಸಬೇಕು.

ರೈತರಿಗೆ ಗುಣಮಟ್ಟದ ಬೀಜ ಮತ್ತು ರಸಗೊಬ್ಬರಗಳ ಬಗ್ಗೆ ಮಾಹಿತಿ ನೀಡುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ನಕಲಿ ಉತ್ಪನ್ನಗಳನ್ನು ಗುರುತಿಸುವ ಬಗ್ಗೆ ಅವರಿಗೆ ಅರಿವು ಮೂಡಿಸಬೇಕು. ಸರಕಾರದ ನಿಷ್ಕ್ರಿಯತೆಯು ರೈತ ಸಮುದಾಯದಲ್ಲಿ ಅಸಮಾಧಾನ ಮತ್ತು ಆತಂಕವನ್ನು ಹೆಚ್ಚಿಸುತ್ತದೆ. ಅನ್ನದಾತ ಸಂಕಷ್ಟದಲ್ಲಿರುವಾಗ, ಅವನಿಗೆ ನೆರವಾಗುವುದು ಸರಕಾರದ ಪ್ರಥಮ ಆದ್ಯತೆಯಾಗಬೇಕು.

ಈ ವಿಷಯದಲ್ಲಿ ಯಾವುದೇ ನಿರ್ಲಕ್ಷ್ಯ ಸಲ್ಲದು. ರೈತನಿಗೆ ನ್ಯಾಯ ಒದಗಿಸಲು, ಗುಣಮಟ್ಟದ ಕೃಷಿ ಉತ್ಪನ್ನಗಳ ಲಭ್ಯತೆಯನ್ನು ಖಚಿತಪಡಿಸಲು ಸರಕಾರ ತಕ್ಷಣ ಕಾರ್ಯಪ್ರವೃತ್ತವಾಗಲಿ.

---

ಪಾಳೆಗಾರರ ದೊರೆ ಬಸವಂತನಾಯಕ ಆಳ್ವಿಕೆಯ ಕಾಲದಲ್ಲಿನ ಶಿಲಾಶಾಸನ

# ಪಾಳೆಗಾರರ ಕಾಲದ ಅಪ್ರಕಟಿತ ಶಿಲಾಶಾಸನ ಪತ್ತೆ

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ವಿಜಯನಗರ ಜಿಲ್ಲೆಯ ಹರಪನಹಳ್ಳಿ ತಾಲೂಕಿನ ಚಿರಸ್ತಹಳ್ಳಿ ಗ್ರಾಮದಲ್ಲಿ ಹರಪನಹಳ್ಳಿ ಪಾಳೇಗಾರರ ಸಂಸ್ಥಾನದ ದೊರೆಗಳ ಆಳ್ವಿಕೆಯಲ್ಲಿನ ಅವಧಿಯ ಶಿಲಾಶಾಸನ ಪತ್ತೆಯಾಗಿದೆ ಎಂದು ಸಂಶೋಧಕಿ ಎಂ.ಪಿ. ವೀಣಾಮಹಾಂತೇಶ್ ತಿಳಿಸಿದ್ದಾರೆ.

ಹರಪನಹಳ್ಳಿಯಿಂದ ಹರಿಹರಕ್ಕೆ ಸಂಪರ್ಕ ಬೆಸೆಯುವ ಶಿವಮೊಗ್ಗ-ಮರಿಯಮ್ಮನಹಳ್ಳಿ ರಾಜ್ಯಹೆದ್ದಾರಿಗೆ ಹೊಂದಿಕೊಂಡಿರುವ ಈ ಚಿರಸ್ತಹಳ್ಳಿಯಲ್ಲಿ ಈ ಅಪರೂಪದ ಶಿಲಾಶಾಸನ ಪತ್ತೆಯಾಗಿದೆ. ಜತೆಗೆ, ಇದೇ ಗ್ರಾಮದಲ್ಲಿರುವ ಶಂಕರಲಿಂಗಸ್ವಾಮಿ ದೇವಾಲಯದ ಆವರಣದಲ್ಲಿ ರಾಷ್ಟ್ರಕೂಟ ದೊರೆಗಳ ಆಳ್ವಿಕೆಯಲ್ಲಿನ ಎರಡು ವೀರಗಲ್ಲು ಶಾಸನಗಳು ಹಾಗೂ ಚಾಲುಕ್ಯ ರಾಜಮನೆತನದ ರಾಜತ್ರೈಲೋಕಮಲ್ಲದೇವನ (.11/1/1050) ಹಾಗೂ ಇಮ್ಮಡಿ ನೊಳಂಬನ ಒಂದು ಶಾಸನ ಸೇರಿದಂತೆ ಒಟ್ಟಾರೆ ನಾಲ್ಕು ಶಾಸನಗಳು ಪತ್ತೆಯಾಗಿವೆ ಎಂದು ವೀಣಾ ಮಹಾಂತೇಶ್ ತಿಳಿಸಿದ್ದಾರೆ.

ಇತ್ತೀಚೆಗೆ ಗ್ರಾಮದಲ್ಲಿ ಕ್ಷೇತ್ರ ಕಾರ್ಯ ಕೈಗೊಂಡ ಸಂದರ್ಭದಲ್ಲಿ ಊರಿನ ಮಧ್ಯಭಾಗದಲ್ಲಿರುವ ಬಸವೇಶ್ವರ ದೇವಾಲಯದ ಪಕ್ಕದಲ್ಲಿ ಹರಪನಹಳ್ಳಿ ಪಾಳೇಗಾರರ ಅಪ್ರಕಟಿತ ಶಾಸನ ದೊರೆತಿದೆ. ಪೂರ್ವ ದಿಕ್ಕಿಗೆ ಮುಖ ಮಾಡಿರುವ ಈ ಶಾಸನವು 2ಅಡಿ ಎತ್ತರ




ಹಾಗೂ 2ಅಡಿ ಅಗಲದ ವ್ಯಾಸವನ್ನು ಹೊಂದಿದೆ. ಜತೆಗೆ, ಈ ಶಾಸನವು 6ಐತಿಹಾಸಿಕ ಕುರುಹುಗಳ ಬರಹದ ಸಾಲುಗಳನ್ನು ಹೊಂದಿದೆ. ಶಾಸನದ ಮೇಲ್ಭಾಗದಲ್ಲಿ ಶಿವಲಿಂಗ ಹಾಗೂ ಅಕ್ಕ-ಪಕ್ಕದಲ್ಲಿ ಸೂರ್ಯ- ಚಂದ್ರರ ರೇಖಾ ಚಿತ್ರಗಳನ್ನು ಹೊಂದಿದೆ ಎಂದು ಸಂಶೋಧಕಿ ವೀಣಾ ಮಹಾಂತೇಶ್ ತಿಳಿಸಿದ್ದಾರೆ.

ಶಾಸನದಲ್ಲಿ ಅರಸಿಣ ಮಠದ ಚನಬಸವನ ಹಾಗೂ ಬಸವಂಥರಯ ಎಂಬ ವ್ಯಕ್ತಿಗಳ ಉಲ್ಲೇಖವನ್ನು ಒಳಗೊಂಡಿದೆ. ಇಮ್ಮಡಿ ಬಸವಂಥರಯ್ಯ ಅಥವಾ ಇಮ್ಮಡಿ ಬಸವಂತ ನಾಯಕ ಹರಪನಹಳ್ಳಿ ಪಾಳೇಗಾರರ ದೊರೆಗಳ ಒಬ್ಬ ಅರಸ. ಈ ಬಸವಂತನಾಯಕ ದೊರೆಯು ಕ್ರಿ.ಶ. 1715ರಿಂದ

**ಶಿಲಾಶಾನದಲ್ಲಿ ಉಲ್ಲೇಖವಾಗಿರುವ ಅಂಶಗಳು:**

1) ಅರಸಿನಮಠದ ಚನಬಸವನ
2) ಹಂಳಿಯಿಂಮಡಿ ಬಸವಂಥರಾಯ
3) ಶರಣು ಮಾಡಿದ ಗ್ರಾಮ
4) ಯಿ ಗ್ರಾಮವು ಯಾರು ಅಲುಪಿದ
5) ಹಾಗೆ

ಕ್ರಿ.ಶ1716 ಅವಧಿಯಲ್ಲಿ ಕೇವಲ ಒಂದು ವರ್ಷ ಮಾತ್ರ ಸಂಸ್ಥಾನದ ರಾಜ್ಯಭಾರ ಮಾಡಿದ್ದಾನೆ. ಹೀಗಾಗಿ, ಈ ಶಾಸನದ ಕಾಲವನ್ನು ಕ್ರಿ.ಶ. 1715ರಿಂದ 1716ರ ಕಾಲಮಾನ ಎಂದು ಗುರುತಿಸಬಹುದಾಗಿದೆ. ಎರಡನೇ ಬಸವಂತನಾಯಕನದ ಪತ್ನಿ ಹರಿಮಮ್ಮಾಜೀ. ಇವಳು ತನ್ನ ಪತಿಯ ಮರಣದ ನಂತರ ಐದು ವರ್ಷಗಳ ಕಾಲ ಸಂಸ್ಥಾನದ ರಾಜ್ಯಭಾರವನ್ನು ಮಾಡಿದ್ದಾಳೆ. ದಂಪತಿಗಳಿಬ್ಬರು ಹಲವು ದಾನ, ಧರ್ಮಾಧಿಗಳನ್ನು ಕೈಗೊಂಡಿರುವುದು ಕಂಚಿನ ಹಸ್ತಪ್ರತಿ ಹಾಗೂ ಶಾಸನಗಳಿಂದ ಮಾಹಿತಿ ಲಭ್ಯವಾಗುತ್ತಿದೆ. ಎರಡನೇ ಬಸವಂತನಾಯಕನು ದಾರಿಹೋಕರಿಗಾಗಿ, ಪ್ರಯಾಣಿಕರಿಗಾಗಿ



ಗ್ರಾಮದಲ್ಲಿ ಪತ್ತೆಯಾಗಿರುವ ಅಪ್ರಕಟಿತ ಶಿಲಾಶಾಸನವು ಹರಪನಹಳ್ಳಿ ಪಾಳೇಗಾರರ ರಾಜಮನೆತನ ಮಹತ್ವದ ಐತಿಹಾಸಿಕ ದಾಖಲೆಯಾಗಿದೆ. ಚನ್ನಬಸವ ಸ್ವಾಮಿಗಳಿಗೆ ಸಂಬಂಧಿಸಿದ ತಾಮ್ರಪಟ ಹಾಗೂ ಹಸ್ತಪ್ರತಿಗಳು ಸಹ ದೊರಕಿವೆ. ಇವುಗಳನ್ನು ಸಮಗ್ರವಾಗಿ ಅಧ್ಯಯನ ಮಾಡುವ ಮೂಲಕ ಕಾಲಗರ್ಭದಲ್ಲಿ ಹುದುಗಿಹೋಗಿರುವ ಪಾಳೇಗಾರರ ಐತಿಹಾಸಿಕ ಮಹತ್ವದ ಸಂಗತಿಗಳನ್ನು ಪ್ರಚುರಪಡಿಸಬೇಕಾದ ಅಗತ್ಯತೆ ಇದೆ.

**-ಎಂ.ಪಿ. ವೀಣಾ ಮಹಾಂತೇಶ್,** ಸಂಶೋಧಕಿ,(ರಾಜ್ಯದ ಮಾಜಿ ಉಪಮುಖ್ಯಮಂತ್ರಿ ದಿ.ಎಂ.ಪಿ. ಪ್ರಕಾಶ್ ಅವರ ಪುತ್ರಿ)



ನೀರು ಹಾಗೂ ನೆರಳಿನ ವ್ಯವಸ್ಥೆಗಾಗಿ ಸಂಸ್ಥಾನದಲ್ಲಿನ ವಿವಿಧೆಡೆ ರಸ್ತೆಗಳಲ್ಲಿ ಅಲ್ಲಲ್ಲಿ ನೀರಿನ ಅರವಟ್ಟಿಗೆ ಮತ್ತು ಪ್ರಯಾಣಿಕರು, ಪ್ರವಾಸಿಗರು ಹಾಗೂ ದಾರಿಹೋಕರಿಗಾಗಿ ಧಣಿವಾರಿಸಿಕೊಳ್ಳಲು ರಸ್ತೆಗಳ ಇಕ್ಕೆಲಗಳಲ್ಲಿ ಗಿಡ- ಮರಗಳನ್ನು ಬೆಳೆಸಿರುವ ಕುರಿತು ಶಾಸನ ಹಾಗೂ ಹಸ್ತಪ್ರತಿಗಳಲ್ಲಿ ಮಾಹಿತಿ ದೊರಕುತ್ತದೆ ಎಂದು ವೀಣಾ ಮಹಾಂತೇಶ್ ವಿಶ್ಲೇಷಿಸುತ್ತಾರೆ. ಪತ್ತೆಯಾಗಿರುವ ಅಪ್ರಕಟಿತ ಶಾಸನದಲ್ಲಿ ಉಲ್ಲೇಖಿತವಾಗಿರುವ ಅರಿಣಮಟ(ಮಠ) ಚನಬಸವನ ಎಂಬ ವಾಕ್ಯಗಳ ಸಾಲುಗಳನ್ನು ಗಮನಿಸಿದರೆ, ಹರಪನಹಳ್ಳಿ ಪಟ್ಟಣದ ಕುರುಬರಗೇರಿಯಲ್ಲಿರುವ ಮಠದ ಪಕ್ಕದಲ್ಲಿರುವ ಬಾವಿಯನ್ನು ಅರಸನಮಠ, ಅರಸನಬಾವಿ ಎಂದು ಕರೆಯುತ್ತಾರೆ. ಮುಮ್ಮಡಿ ಬಸಪ್ಪನಾಯಕನಿಗೆ ಮಠದ ಚನ್ನಬಸವಸ್ವಾಮಿ ಅವರು ಲಿಂಗಧಾರಣೆ ಮಾಡಿಸಿದ್ದಾರೆ. ಹೀಗಾಗಿ, ಶಾಸನದಲ್ಲಿ ಉಲ್ಲೇಖಿತವಾದ ಅರಸಿನಮಠ ಹರಪನಹಳ್ಳಿಯ ಕುರುಬಗೇರಿಯ ಮಠವೇ ಆಗಿರಬೇಕು ಎನ್ನುತ್ತಾರೆ ಸಂಶೋಧಕಿ ವೀಣಾ ಮಹಾಂತೇಶ್ ಅವರು. ಕಾರ್ಯಕ್ಷೇತ್ರದ ಸಂದರ್ಭದಲ್ಲಿ ನೆರವು ನೀಡಿದ ಹಾಗೂ ಶಾಸನದ ಸುಳಿವು ನೀಡಿದ ರೇಣುಕಾಪ್ರಸಾದ್, ಮಲ್ಲಿಕಾರ್ಜುನಸ್ವಾಮಿ ಕಲ್ಮಠ, ಡಾ.ರವಿಕುಮಾರ ನವಲಗುಂದ, ಡಾ.ವರೇಶ್, ನೇತ್ರಾ, ದಾದಾಪೀರ್ ಮಕರಬ್ಬಿ ಹಾಗೂ ಚಿರಸ್ತಹಳ್ಳಿ ಗ್ರಾಮಸ್ಥರಿಗೆ ಸಂಶೋಧಕಿ ವೀಣಾ ಮಹಾಂತೇಶ್ ಅವರು ಕೃತಜ್ಞತೆಗಳನ್ನು ಸಲ್ಲಿಸಿದ್ದಾರೆ.

---

ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿಯಿಂದ ಬಸ್ ನಿಲ್ದಾಣ ಪರಿಶೀಲನೆ

# ಸ್ವಚ್ಛತೆಗೆ ಪ್ರಥಮ ಆದ್ಯತೆ ನೀಡಿ



■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ನೇತೃತ್ವದಲ್ಲಿ ಸಮಿತಿ ಸದಸ್ಯರು ಗುರುವಾರ ನಗರದ ಕೇಂದ್ರ ಬಸ್ ನಿಲ್ದಾಣಕ್ಕೆ ಭೇಟಿ ನೀಡಿ ವ್ಯವಸ್ಥೆಯ ಪರಿಶೀಲನೆ ನಡೆಸಿದರು.

ಬಸ್ ನಿಲ್ದಾಣದ ಆವರಣವನ್ನು ಪರಿಶೀಲನೆ ನಡೆಸಿದ ಅವರು, ನಿಲ್ದಾಣದ ಸ್ವಚ್ಛತೆಗೆ ಗಮನ ಹರಿಸಬೇಕು. ಇದೇ ಜೂನ್ 20ಕ್ಕೆ ಪುನಃ ಬಸ್‌ನಿಲ್ದಾಣಕ್ಕೆ ಸ್ವಚ್ಛತೆಯ ಪರಿಶೀಲನೆಗಾಗಿ ಆಗಮಿಸುವೆ. ಆ ಸಂದರ್ಭದಲ್ಲಿ ನಿಲ್ದಾಣದ ಆವರಣ ಶುಚಿಯಾಗಿರಬೇಕು. ನಿಲ್ದಾಣದಲ್ಲಿನ ಸಾರ್ವಜನಿಕರಿಗೆ ಕೂರಲು ಉತ್ತಮ ಆಸನಗಳ ವ್ಯವಸ್ಥೆ ಇರುವಂತೆ ನೋಡಿಕೊಳ್ಳಬೇಕು. ಅಲ್ಲದೇ ಪ್ಲಾಸ್ಟಿಕ್ ಮುಕ್ತ ನಿಲ್ದಾಣ ಆಗಬೇಕು. ಈ ಬಗ್ಗೆ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಬಿ.ಬಿ. ಅಸೂಟಿ ನಿರ್ದೇಶನ ನೀಡಿದರು.

ನಿಲ್ದಾಣದ ಆವರಣದಲ್ಲಿರುವ ಶಿಶು ಆರೈಕೆ ವಿಶ್ರಾಂತಿ ಕೊಠಡಿಗೆ ಭೇಟಿ ನೀಡಿದ ಅವರು, ವಿಶ್ರಾಂತಿ ಕೊಠಡಿಯಲ್ಲಿ ಶುದ್ಧ ಗಾಳಿ, ಬೆಳಕಿನ ವ್ಯವಸ್ಥೆ ಕಲ್ಪಿಸಬೇಕು. ಜೊತೆಗೆ ಶುಭ್ರವಾಗಿರುವಂತೆ ನೋಡಿಕೊಳ್ಳಬೇಕು ಹಾಗೂ ಪ್ರತಿನಿತ್ಯ ವಿಶ್ರಾಂತಿ ಕೊಠಡಿಗೆ ಸಾರ್ವಜನಿಕರು ಆಗಮಿಸುವಂತೆ ಶುಚಿಯಾಗಿಟ್ಟುಕೊಳ್ಳಲು ಸಂಸ್ಥೆಯ ಅಧಿಕಾರಿಗಳಿಗೆ ಜಿಲ್ಲಾಧ್ಯಕ್ಷ ಬಿ.ಬಿ. ಅಸೂಟಿ ನಿರ್ದೇಶನ ನೀಡಿದರು.

ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿಯಿಂದ ಜೂನ್ 20ಕ್ಕೆ ಪುನಃ ಪರಿಶೀಲನೆಗೆ ಆಗಮಿಸಲಾಗುವುದು. ಆ ಸಂದರ್ಭದಲ್ಲಿ ಇಂದು ನೀಡಿದ ಎಲ್ಲ ಸೂಚನೆಗಳು ಕಾರ್ಯರೂಪಕ್ಕೆ ಬಂದಿರಬೇಕು. ಇಲ್ಲವಾದಲ್ಲಿ ಸಂಬಂಧಿತ ಅಧಿಕಾರಿಗಳ ಮೇಲೆ ಶಿಸ್ತು ಕ್ರಮಕ್ಕೆ ಆಗ್ರಹಿಸಲಾಗುವುದು ಎಂದರು.

ನಿಲ್ದಾಣದ ಆವರಣದಲ್ಲಿನ ಮಹಿಳೆಯರೊಂದಿಗೆ ಹಾಗೂ ಗ್ಯಾರಂಟಿ ಫಲಾನುಭವಿಗಳೊಂದಿಗೆ ಸಂವಾದ ನಡೆಸಿದ ಸಮಿತಿ ಸದಸ್ಯರು, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಹಾಗೂ ಯಶಸ್ಸಿನ ಬಗ್ಗೆ ಅಭಿಪ್ರಾಯಗಳನ್ನು ಆಲಿಸಿದರು. ಶಕ್ತಿ ಯೋಜನೆ ಮಹಿಳೆಯರ ಸಬಲತೆಗೆ ಶಕ್ತಿಯಾಗಿ ನಿಂತಿರುವುದು ಅಕ್ಷರಶಃ ಸತ್ಯ. ಅದರಂತೆ ಸುಸ್ಥಿರ ಬದುಕಿಗಾಗಿ ಗೃಹಲಕ್ಷ್ಮೀ ಯೋಜನೆ, ಹಸಿವು ಮುಕ್ತ ಕರ್ನಾಟಕಕ್ಕೆ ಅನ್ನಭಾಗ್ಯ ಹಾಗೂ ಬಡವರ ಆಶಾಕಿರಣ ಗೃಹಜ್ಯೋತಿ, ನಿರುದ್ಯೋಗ ನಿವಾರಣೆಗೆ ಯುವನಿಧಿ ಸಹಕಾರಿಯಾಗಿವೆ ಎಂದು ಫಲಾನುಭವಿಗಳು ತಮ್ಮ ಮನದಾಳದ ಅಭಿಪ್ರಾಯಗಳನ್ನು ವ್ಯಕ್ತಪಡಿಸುತ್ತಾ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವರಾದ ಎಚ್.ಕೆ. ಪಾಟೀಲ ಸೇರಿದಂತೆ ಸರ್ಕಾರಕ್ಕೆ ಧನ್ಯವಾದಗಳನ್ನು ಸಲ್ಲಿಸಿದರು.

ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ನೀಲಮ್ಮ ಬೋಳನವರ, ಸದಸ್ಯರಾದ ಈಶ್ವರ ಹುಣಸಿಕಟ್ಟಿ, ಅಶೋಕ ಮಂದಾಲಿ, ಭಾಷಾ ಮಲ್ಲಸಮುದ್ರ, ಸಾವಿತ್ರಿ ಹೂಗಾರ, ನಿಂಗಪ್ಪ ದೇಸಾಯಿ, ಮುಲ್ಲಾ ಬಾರಕೇರ, ಸಂಗಮೇಶ ಹಾದಿಮನಿ, ಶಂಭು ಕಾಳೆ, ಗಣೇಶ ಮಿಟಾಯಿ, ಗಣ್ಯರಾದ ಚನ್ನಬಸಪ್ಪ ಅಕ್ಕಿ, ಅನಿಲ ಗರಗ, ಮೋಹನ ದೊಡ್ಡಬಂಡಿ, ಸಮೀರ ಉಪಸ್ಥಿತರಿದ್ದರು.

ನಿಲ್ದಾಣದ ಆವರಣದಲ್ಲಿರುವ ಶೌಚಾಲಯದ ಪರಿಶೀಲನೆ ನಡೆಸಿ, ಅಲ್ಲಿಯೂ ಸಹ ಸ್ವಚ್ಛತೆ ಅಗತ್ಯವಾಗಿದೆ. ಅಲ್ಲದೇ ಸಾರ್ವಜನಿಕರಿಂದ ನಿಗದಿತ ಶುಲ್ಕ ಪಡೆದು ಸಾರ್ವಜನಿಕರಿಗೆ ಶೌಚಾಲಯ ಬಳಕೆಗೆ ದೊರೆಯಬೇಕು. ಹೆಚ್ಚುವರಿ ಶುಲ್ಕ ವಸೂಲಿ ಮಾಡುತ್ತಿರುವ ಕುರಿತು ದೂರುಗಳು ಬಂದಿದ್ದು, ಪುನಃ ದೂರುಗಳು ಬರದಂತೆ ಸಾರಿಗೆ ಸಂಸ್ಥೆಯ ಅಧಿಕಾರಿಗಳು ನಿಗಾ ವಹಿಸಲು ಬಿ.ಬಿ. ಅಸೂಟಿ ಸೂಚಿಸಿದರು.

---

# ರಾಜ್ಯದಲ್ಲಿ ಜಾತಿ ಗಣತಿ ಮರು ಸಮೀಕ್ಷೆಗೆ ಸಚಿವ ಸಂಪುಟ ಒಪ್ಪಿಗೆ: 1 ಸಮೀಕ್ಷೆಗೆ 10 ವರ್ಷ ಅವಧಿ ಎಂದ ಸಿಎಂ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯದಲ್ಲಿ ಮತ್ತೊಮ್ಮೆ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ (ಜಾತಿ ಜನಗಣತಿ) ನಡೆಸಲು ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನಿಸಿದೆ.

ಸಂಪುಟ ಸಭೆಯ ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ್ದಾರೆ.

ನ್ಯಾ.ಕಾಂತರಾಜು ಅವರ ಆಯೋಗ ವರದಿ ಸಲ್ಲಿಸಿ 10 ವರ್ಷ ಕಳೆದಿದೆ. ಹಿಂದುಳಿದ ವರ್ಗಗಳ ಆಯೋಗದ ಕಾಯ್ದೆ ಸೆಕ್ಷನ್ 11ರ ಪ್ರಕಾರ 10 ವರ್ಷ ಆದ ಬಳಿಕ ಹೊಸ ಸಮೀಕ್ಷೆ ನಡೆಸಬೇಕು ಎಂದು ಹೇಳಿದೆ. ಅಲ್ಲದೆ ಹೈಕಮಾಂಡ್ ಕೂಡಾ ಸಲಹೆ ನೀಡಿದೆ ಎಂದು ಸಿದ್ದರಾಮಯ್ಯ ಹೇಳಿದ್ದಾರೆ.

ಜಾತಿ ಗಣತಿ ಮರು ಸಮೀಕ್ಷೆ ವಿಚಾರವಾಗಿ ಚರ್ಚಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ಗುರುವಾರ (ಜೂ.12) ವಿಶೇಷ ಸಚಿವ ಸಂಪುಟ ಸಭೆ ನಡೆಯಿತು.

ಸಚಿವ ಸಂಪುಟ ಸಭೆಯಲ್ಲಿ



ಜಾತಿಗಣತಿ ಸಮೀಕ್ಷೆ ಕುರಿತು ಚರ್ಚಿಸಿದ್ದೇವೆ. 2011ರಲ್ಲಿ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಸ್ಥಿತಿ ಬಗ್ಗೆ ಸರ್ವೆ ನಡೆಸಲಾಗಿತ್ತುನಡೆಸಿದ್ದವು. 54 ಮಾನದಂಡಗಳು ಇಟ್ಟುಕೊಂಡು ಮನೆ ಮನೆಗೆ ಹೋಗಿ ಸರ್ವೆ ಮಾಡಿರುವ ವರದಿ ಪಡೆದಿದ್ದೇವೆ. 2011ರ ಜನಗಣತಿ ಪ್ರಕಾರ ರಾಜ್ಯದ ಜನಸಂಖ್ಯೆ 6.11 ಕೋಟಿ ಇದೆ ಎಂದು ಹೇಳಿದರು.

2015ರಲ್ಲಿ 6.35 ಕೋಟಿ ಜನಸಂಖ್ಯೆ ಎಂದು ಅಂದಾಜಿಸಲಾಗಿದೆ. ಇದರಲ್ಲಿ ಸರ್ವೆ ಆಗಿದ್ದು 5.98 ಕೋಟಿ ಜನರದ್ದು. 2015ರ ಏಪ್ರಿಲ್ 11ರಂದು ಜಾತಿಗಣತಿ ಸರ್ವೆ ಆರಂಭಿಸಿದೆ. 2025ರ ನವೆಂಬರ್ 30ರಂದು ಸರ್ವೆ ಮುಕ್ತಾಯಗೊಂಡಿತ್ತು. 1.60 ಲಕ್ಷ ಸಿಬ್ಬಂದಿ ಜಾತಿಗಣತಿ ಸರ್ವೆಯಲ್ಲಿ ಭಾಗಿಯಾಗಿದ್ದರು ಎಂದರು.

ನ್ಯಾ.ಕಾಂತರಾಜು ಸರ್ವೆಯ ದತ್ತಾಂಶ ಪಡೆದು ಜಯಪ್ರಕಾಶ್ ಹೆಗ್ಡೆ ಅವರು ಶಿಫಾರಸು ಮಾಡಿದರು. 2024ರ ಫೆ.29ರಂದು ಸರ್ಕಾರಕ್ಕೆ ಜಯಪ್ರಕಾಶ್ ಅವರು ಸರ್ಕಾರಕ್ಕೆ ವರದಿ ಸಲ್ಲಿಸಿದ್ದರು. ಪಾರ್ಲಿಮೆಂಟ್ ಚುನಾವಣೆ ಕಾರಣದಿಂದ ವರದಿ ಚರ್ಚಿಸಲಿಲ್ಲ ಎಂದರು.

---

# ಪಾಕಿಸ್ತಾನ ಪರ ಬೇಹುಗಾರಿಕೆ | ಬಂಧಿತ ಯೂಟ್ಯೂಬರ್ ಜ್ಯೋತಿ ಜಾಮೀನು ಅರ್ಜಿ ತಿರಸ್ಕೃತ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಪಾಕಿಸ್ತಾನ ಪರ ಬೇಹುಗಾರಿಕೆ ನಡೆಸಿದ ಆರೋಪದ ಮೇಲೆ ಮೇ 17 ರಂದು ಬಂಧಿಸಲ್ಪಟ್ಟ ಯೂಟ್ಯೂಬರ್ ಜ್ಯೋತಿ ಮಲ್ಹೋತ್ರಾ ಅವರಿಗೆ ಹರಿಯಾಣ ನ್ಯಾಯಾಲಯ ಬುಧವಾರ ಜಾಮೀನು ನಿರಾಕರಿಸಿದೆ ಎಂದು ದಿ ಇಂಡಿಯನ್ ಎಕ್ಸ್‌ಪ್ರೆಸ್ ವರದಿ ಮಾಡಿದೆ. ಜೂನ್ 23 ರವರೆಗೆ ನ್ಯಾಯಾಂಗ ಬಂಧನವನ್ನು ವಿಸ್ತರಿಸಿದ ಒಂದು ದಿನದ ನಂತರ ಜ್ಯೋತಿ ಜಾಮೀನು ಅರ್ಜಿ ಸಲ್ಲಿಸಿದ್ದರು.

ವಿದೇಶದ ಲಾಭಕ್ಕಾಗಿ ಬೇಹುಗಾರಿಕೆ ಮತ್ತು ತಪ್ಪು ಮಾಹಿತಿ ಸಂವಹನಕ್ಕೆ ಸಂಬಂಧಿಸಿದ ಅಧಿಕೃತ ರಹಸ್ಯ ಕಾಯ್ದೆಯ ವಿಭಾಗಗಳು ಮತ್ತು ಭಾರತದ ಸಾರ್ವಭೌಮತ್ವ, ಏಕತೆ ಮತ್ತು ಸಮಗ್ರತೆಗೆ ಅಪಾಯವನ್ನುಂಟುಮಾಡುವ ಕೃತ್ಯಗಳನ್ನು ಶಿಕ್ಷಿಸುವ ಭಾರತೀಯ ನ್ಯಾಯ ಸಂಹಿತಾದ ನಿಬಂಧನೆಯ



ಅಡಿಯಲ್ಲಿ ಅವರ ಮೇಲೆ ಆರೋಪ ಹೊರಿಸಲಾಗಿದೆ.

2023 ರಲ್ಲಿ ಜ್ಯೋತಿ ಮಲ್ಹೋತ್ರಾ ಪಾಕಿಸ್ತಾನಕ್ಕೆ ಪ್ರಯಾಣಿಸಲು ವೀಸಾ ಪಡೆದರು ಮತ್ತು ಎರಡು ಬಾರಿ ಅಲ್ಲಿಗೆ ಪ್ರಯಾಣಿಸಿದರು ಎಂದು ಪೊಲೀಸರು ತಿಳಿಸಿದ್ದಾರೆ. ಅವರ ಒಂದು ಪ್ರವಾಸದ ಸಮಯದಲ್ಲಿ, ಅವರು ಇಬ್ಬರು ಪಾಕಿಸ್ತಾನಿ ಗುಪ್ತಚರ ಅಧಿಕಾರಿಗಳಾದ ಶಕೀರ್ ಮತ್ತು ರಾಣಾ ಶಹಬಾಜ್ ಅವರನ್ನು ಪರಿಚಯ ಮಾಡಿಕೊಂಡರು ಎಂದು ಆರೋಪಿಸಲಾಗಿದೆ.

---

ಪೌರ್ಣಿಮೆ ಧರ್ಮ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು


# ಸಕಲ ಧರ್ಮಕ್ಕೂ ದಯೆ, ಮಾನವೀಯತೆ ಮುಕುಟಪ್ರಾಯ

■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಜಗದಲ್ಲಿ ಒಳ್ಳೆಯದು ಕೆಟ್ಟದ್ದು ಎರಡೂ ಇವೆ. ನೋಡುವ ದೃಷ್ಟಿಯನ್ನು ಅವಲಂಬಿಸಿರುತ್ತದೆ. ಸಕಲ ಧರ್ಮಕ್ಕೂ ದಯೆ ಮತ್ತು ಮಾನವೀಯತೆ ಮುಕುಟಪ್ರಾಯವಾಗಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಬುಧವಾರ ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಜರುಗಿದ ಪೌರ್ಣಿಮೆ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಸಮಾಜದ ಕಷ್ಟ-ಸುಖಗಳನ್ನು ಚಿಂತಿಸಿ ಅವುಗಳಿಗೆ ಪರಿಹಾರ ಮಾಡುವ ಕಾರ್ಯದಲ್ಲಿ ಪ್ರವೃತ್ತರಾಗಿರುವುದೇ ನಿಜವಾದ ಧರ್ಮ. ಜೀವನಾಧಾರಕ್ಕೆ ನೀರು,



ಅನ್ನ, ಗಾಳಿ ಮತ್ತು ಒಳ್ಳೆಯ ಮಾತು ಮುಖ್ಯ. ಸತ್ಯ ಸಂಸ್ಕೃತಿ ಗೌರವಿಸದೇ ಹೋದರೆ ಜೀವನ ನಾಶಗೊಳ್ಳುತ್ತದೆ. ಜೀವ ಹೋಗುವ ಈ ದೇಹ, ನಾಶವಾಗುವ ಈ ಸಂಪತ್ತು ಮತ್ತು ಮಾಸಿ ಹೋಗುವ ಸೌಂದರ್ಯವನ್ನು ನೆಚ್ಚದೇ ಸತ್ಯ ಶುದ್ಧ ಧರ್ಮ ಮಾರ್ಗದಲ್ಲಿ ನಡೆಯುವುದರಿಂದ ಜೀವನದಲ್ಲಿ ಸಕಲ ಸಂಪತ್ತು ಶಾಂತಿ ದೊರಕುವುದೆಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಜೀವನ ಸಿದ್ಧಾಂತದಲ್ಲಿ ಬೋಧಿಸಿದ್ದಾರೆ.

ನಾವು ಏನು ಪಡೆದಿದ್ದೇವೆ ಎನ್ನುವುದಕ್ಕಿಂತ ಹೇಗೆ ದುಡಿದಿದ್ದೇವೆ ಎಂಬುದು ಮುಖ್ಯ. ಏನು ನುಡಿದಿದ್ದೇವೆ ಎನ್ನುವುದಕ್ಕಿಂತ ಹೇಗೆ ನಡೆದಿದ್ದೇವೆ ಎಂಬುದು ಮುಖ್ಯ. ಏನು ಗಳಿಸಿದ್ದೇವೆ ಎನ್ನುವುದಕ್ಕಿಂತ ಹೇಗೆ ಬೆಳೆದಿದ್ದೇವೆ ಎಂಬುದು ಮುಖ್ಯ. ಏನು ಹೇಳಿ ಕೇಳಿದೆವು ಅನ್ನುವುದಕ್ಕಿಂತ ಹೇಗೆ ಬಾಳಿದೆವು ಎಂಬುದು ಮುಖ್ಯ. ಅರಿತು ಬಾಳುವುದರಿಂದ ಬಾಳು ವಿಕಾಸಗೊಳ್ಳುವುದೆಂದರು.

ರಾಜ್ಯದ ವೈದ್ಯಕೀಯ ಮತ್ತು ಕೌಶಲ್ಯಾಭಿವೃದ್ಧಿ ಸಚಿವರಾದ ಡಾ. ಶರಣ ಪ್ರಕಾಶ ಪಾಟೀಲರು ಶ್ರೀ ರಂಭಾಪುರಿ ಪೀಠಕ್ಕೆ ಭೇಟಿಯಿತ್ತು ಶ್ರೀ ಜಗದ್ಗುರು ರೇಣುಕಾಚಾರ್ಯರಿಗೆ ಮತ್ತು ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿಗೆ ಪೂಜೆ ಸಲ್ಲಿಸಿ ಶ್ರೀ ರಂಭಾಪುರಿ ಜಗದ್ಗುರುಗಳ ದರ್ಶನಾಶೀರ್ವಾದ ಪಡೆದರು. ಸಮಾರಂಭದಲ್ಲಿ ನೆಗಳೂರು, ಆಲಮೇಲ, ಸೋನಪೇಟೆ, ಹುಡುಗಿ, ವೆಂಕಟಬೆನ್ನೂರು ಶ್ರೀಗಳು ಪಾಲ್ಗೊಂಡಿದ್ದರು. ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಅಂಶುಮಂತ್, ಬಳ್ಳಾರಿ ಮಹಲಿಂಗಯ್ಯ, ಪ್ರಭುಸ್ವಾಮಿ, ಗ್ರಾಮ ಪಂಚಾಯತಿ ಎಲ್ಲ ಸದಸ್ಯರು ಉಪಸ್ಥಿತರಿದ್ದರು. ಸುಮಾರು 13 ಜನ ವೀರಮಾಹೇಶ್ವರ ವಟುಗಳಿಗೆ ಶಿವದೀಕ್ಷಾ ಮತ್ತು ಅಯ್ಯಾಚಾರ ಜರುಗಿತು. ಕ್ಷೇತ್ರದ ಎಲ್ಲ ದೈವಗಳಿಗೆ ಹುಣ್ಣಿಮೆ ಪ್ರಯುಕ್ತ ವಿಶೇಷ ಪೂಜಾ ಕಾರ್ಯಗಳು ಜರುಗಿದವು.

**ಜಾತಿ ಜನಗಣತಿ ನಿರ್ಧಾರಕ್ಕೆ ಸ್ವಾಗತ**

ರಾಜ್ಯದಲ್ಲಿ ಜಾತಿ ಜನಗಣತಿಯನ್ನು ಮತ್ತೊಮ್ಮೆ ಮಾಡಬೇಕೆಂದು ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷರು, ಕಾಂಗ್ರೆಸ್ ಧುರೀಣರು ಹೇಳಿದ ಮಾತಿಗೆ ಎಲ್ಲರೂ ಸಹಮತ ವ್ಯಕ್ತಪಡಿಸಿರುವುದಕ್ಕೆ ಶ್ರೀ ರಂಭಾಪುರಿ ಜಗದ್ಗುರುಗಳು ಮೆಚ್ಚುಗೆಯನ್ನು ವ್ಯಕ್ತಪಡಿಸಿದರು. ಜಾತಿ ಜನಗಣತಿ ಸಂದರ್ಭದಲ್ಲಿ ವೀರಶೈವ-ಲಿಂಗಾಯತ ಧರ್ಮದ ಎಲ್ಲಾ ಒಳಪಂಗಡದವರು ವೀರಶೈವ ಲಿಂಗಾಯತ ಎಂದೇ ಬರೆಸಬೇಕೆಂದು ಶ್ರೀಗಳು ತಿಳಿಸಿದರು.

## ಜಿಲ್ಲಾಡಳಿತ ಭವನಕ್ಕೆ ಬಸ್ ಸಂಚಾರ ಕಲ್ಪಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ ಭವನಕ್ಕೆ ಬಸ್ ಸಂಚಾರ ಕಲ್ಪಿಸುವಂತೆ ಒತ್ತಾಯಿಸಿ ರಾಜ್ಯ ಸರಕಾರಿ ನೌಕರರ ಸಂಘದ ಗದಗ ಜಿಲ್ಲಾಧ್ಯಕ್ಷ ಡಾ. ಬಸವರಾಜ ಬಳ್ಳಾರಿ ನೇತೃತ್ವದಲ್ಲಿ ಕೆಎಸ್‌ಆರ್‌ಟಿಸಿ ಗದಗ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಈ ಹಿಂದೆ ಗದಗ ಜಿಲ್ಲಾಡಳಿತ ಭವನಕ್ಕೆ ಬಸ್ ಸಂಚಾರವಿತ್ತು. 3 ತಿಂಗಳ ಹಿಂದೆ ಈ ಸಂಚಾರ ವ್ಯವಸ್ಥೆಯನ್ನು ಸ್ಥಗಿತಗೊಳಿಸಲಾಯಿತು. ಗದಗ ಜಿಲ್ಲಾಡಳಿತ ಭವನಕ್ಕೆ ದಿನ ನಿತ್ಯ ನೂರಾರು ನಾಗರಿಕರು ಕಾರ್ಯ ನಿಮಿತ್ತ ಬರುತ್ತಾರೆ. ಅವರು ಸಂಚಾರಕ್ಕಾಗಿ ಪರದಾಡುತ್ತಿರುವ ಹಿನ್ನೆಲೆಯಲ್ಲಿ ತಕ್ಷಣವೇ ಗದಗ ಜಿಲ್ಲಾಡಳಿತ ಭವನಕ್ಕೆ ಬಸ್ ಸಂಚಾರ ಸೌಲಭ್ಯವನ್ನು ಕಲ್ಪಿಸಬೇಕೆಂದು ನಿಯೋಗ ಮನವಿ ಮಾಡಿತು. ಸರಕಾರಿ ನೌಕರ ನಿಯೋಗಕ್ಕೆ ಸ್ಪಂದಿಸಿದ ಕೆಎಸ್‌ಆರ್‌ಟಿಸಿ ಜಿಲ್ಲಾಧಿಕಾರಿಗಳು, ಬಸ್ ಸೌಲಭ್ಯವನ್ನು ಪ್ರಾರಂಭಿಸುವ ಕುರಿತು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಸರಕಾರಿ ನೌಕರ ಸಂಘದ ಅಧ್ಯಕ್ಷ ಡಾ. ಬಸವರಾಜ ಬಳ್ಳಾರಿ, ಗೌರವಾಧ್ಯಕ್ಷ ಡಿ.ಎಸ್. ತಳವಾರ, ಕೋಶಾಧ್ಯಕ್ಷ ಎಂ.ಎಂ. ನಿಟ್ಟಾಲಿ, ಹಿರಿಯ ಉಪಾಧ್ಯಕ್ಷ ಮಾರುತಿ ಮಂಗಳಾಪೂರ, ಜಿ.ಪಂ ಎ.ಎಸ್.ಓ ಅರವಿಂದ ಬಂಡಿ ಮುಂತಾದವರಿದ್ದರು.

### ಮಾಸಿಕ ಶಿವಾನುಭವ, ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಸಭಾಪತಿ ಬಸವರಾಜ ಹೊರಟ್ಟಿ

## ವೃದ್ಧಾಶ್ರಮಗಳು ಹೆಚ್ಚುತ್ತಿರುವುದು ವಿಷಾದನೀಯ

■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ತವರುಮನೆ ಬಿಟ್ಟು, ಕೊಟ್ಟ ಮನೆಗೆ ಬಂದು ಆ ಮನೆ ಬೆಳಗುವಂತೆ ಜೀವ ಸವೆಸಿ ಹೆತ್ತ ಮಕ್ಕಳನ್ನು ಅಕ್ಕರೆಯಿಂದ ಸಾಕಿ-ಸಲುಹಿ ಮಕ್ಕಳಿಗಾಗಿ ಎಲ್ಲವನ್ನೂ ತ್ಯಾಗ ಮಾಡಿದ ಆ ಮಹಾತಾಯಿಯ ಋಣವನ್ನು ಎಷ್ಟು ಜನ್ಮವೆತ್ತರೂ ತೀರಿಸಲು ಯಾರಿಂದಲೂ ಸಾಧ್ಯವಿಲ್ಲ. ಆ ತಾಯಿ ಕಣ್ಣೀರು ಹಾಕಿದರೆ ಹಾಕಿಸಿದವರಿಗೂ ಭವಿಷ್ಯದಲ್ಲಿ ಕೇಡು ಹಾಗೂ ಕಣ್ಣೀರು ತಪ್ಪಿದ್ದಲ್ಲ ಎಂದು ಸಭಾಪತಿ ಬಸವರಾಜ ಹೊರಟ್ಟಿ ಅಭಿಪ್ರಾಯಪಟ್ಟರು.

ಪಟ್ಟಣದ ಅನ್ನದಾನೀಶ್ವರ ಕಲ್ಯಾಣ ಮಂಟಪದಲ್ಲಿ ಶ್ರೀ ಜಗದ್ಗುರು ಅನ್ನದಾನೀಶ್ವರ ವಿದ್ಯಾಸಮಿತಿ, ಹುಬ್ಬಳ್ಳಿಯ ಅವ್ವ ಸೇವಾ ಟ್ರಸ್ಟ್ ಸಹಯೋಗದಲ್ಲಿ ಬುಧವಾರ ನಡೆದ ಅವ್ವನನ್ನು ಕುರಿತು ವಿಶೇಷ ಉಪನ್ಯಾಸ, 1831ನೇ ಮಾಸಿಕ ಶಿವಾನುಭವ ಮತ್ತು ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.




ಮಕ್ಕಳಿಗಾಗಿ ಸರ್ವಸ್ವವನ್ನೇ ತ್ಯಾಗ ಮಾಡಿದ ತ್ಯಾಗಮಯಿ ಜೀವನ ದಂದ್ದಕ್ಕೂ ಖುಷಿಯಾಗಿರಬೇಕು. ಆದರೆ, ಇತ್ತೀಚಿನ ಕೌಟುಂಬಿಕ ವ್ಯವಸ್ಥೆಯಲ್ಲಿ ಕುಟುಂಬ ಎಂದರೆ ಗಂಡ-ಹೆಂಡತಿ ಎನ್ನುವಂತಾಗಿದೆ. ಕೂಡು ಕುಟುಂಬಗಳು ದೂರವಾಗಿ ಬಹಳ ದಿನಗಳೇ ಆಗಿವೆ. ವೃದ್ಧಾಶ್ರಮಗಳ ಸಂಖ್ಯೆ ಹೆಚ್ಚಾಗುತ್ತಿರುವದು ವಿಷಾದನೀಯ. ಇದಕ್ಕೆಲ್ಲ ಕಾರಣ ಸಂಸ್ಕಾರಯುತ ಶಿಕ್ಷಣದ ಕೊರತೆಯೇ ಮೂಲ ಎಂದರು.

ಸಮಾಜಕ್ಕೆ ಕೈಲಾದಷ್ಟು ಸಹಾಯ ಮಾಡುವ ಮೂಲಕ ಅವ್ವ ಸೇವಾ ಟ್ರಸ್ಟ್ ಸಾರ್ಥಕತೆಯನ್ನು ಕಂಡುಕೊಳ್ಳುತ್ತಿದೆ. ಶ್ರೀಮಠದಲ್ಲಿ ದತ್ತಿ ನಿಧಿ ಸ್ಥಾಪಿಸಿ, ಆ ಮೂಲಕ ಪ್ರತಿವರ್ಷ ಕಾರ್ಯಕ್ರಮ ಆಯೋಜಿಸಿ ಸಮಾಜಕ್ಕೊಂದು ಉತ್ತಮ ಸಂದೇಶವನ್ನು ಕೊಡಿಸುವ ಕೆಲಸ ಮಾಡುತ್ತಾ ಬಂದಿದೆ. ತಮ್ಮ 84ನೇ ವಯಸ್ಸಿನಲ್ಲಿಯೂ ಶ್ರೀಗಳು ಅತ್ಯಂತ ಕ್ರಿಯಾಶೀಲವಾಗಿ ಕೆಲಸ ಮಾಡುವ ಮೂಲಕ ಉತ್ತಮ ಮಾರ್ಗದರ್ಶನ ನೀಡುತ್ತಾ ಬಂದಿದ್ದಾರೆ ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಇಂಥ ಒಂದು ಭಾವನಾತ್ಮಕ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದು ನನ್ನ ಸೌಭಾಗ್ಯ. ಪ್ರತಿಯೊಬ್ಬರೂ ತಮ್ಮ ತಮ್ಮ ಕರ್ತವ್ಯಗಳನ್ನು ಅರಿತು ಕೆಲಸ ಮಾಡಿದರೆ ಉತ್ತಮ ಸಮಾಜ ಕಟ್ಟಲು ಸಾಧ್ಯವಾಗುತ್ತದೆ. ಬಸವರಾಜ ಹೊರಟ್ಟಿಯಂತಹ ಹಿರಿಯರ ಮಾರ್ಗದರ್ಶನ ಸಮಾಜಕ್ಕೆ ಬೇಕಾಗಿದೆ ಎಂದರು.

ಸಾನ್ನಿಧ್ಯ ವಹಿಸಿದ್ದ ಜ. ನಾಡೋಜ ಅನ್ನದಾನೀಶ್ವರ ಮಹಾಸ್ವಾಮಿಗಳು ಮಾತನಾಡಿ, ಇತ್ತೀಚಿನ ಶಿಕ್ಷಣದಲ್ಲಿ ಸಂಸ್ಕಾರಯುತ ಹಾಗೂ ಮೌಲ್ಯಯುತ ಶಿಕ್ಷಣದ ಕೊರತೆಯಿದೆ. ಹೀಗಾಗಿ ಮಕ್ಕಳ ವ್ಯಕ್ತಿತ್ವವನ್ನು ಸಮಾಜಮುಖಿಯಾಗಿ ಕಟ್ಟಲು ಸಾಧ್ಯವಾಗುತ್ತಿಲ್ಲ. ಈ ನಿಟ್ಟಿನಲ್ಲಿ ನಾವೆಲ್ಲರೂ ಯೋಚಿಸಬೇಕಾಗಿದೆ. ಬಸವರಾಜ ಹೊರಟ್ಟಿಯವರು ತಮ್ಮ ತಾಯಿಯ ಸಂಸ್ಮರಣೆ ಜೊತೆಗೆ ನಾಡಿನ ತಾಯಂದಿರನ್ನು ನೆನೆಯುತ್ತಿರುವುದು ಪುಣ್ಯದ ಕೆಲಸ ಎಂದರು.

ಗದಗ ಜಿಲ್ಲಾ ಅವ್ವ ಸೇವಾ ಟ್ರಸ್ಟ್ ಸಂಚಾಲಕ ಡಾ. ಬಸವರಾಜ ಧಾರವಾಡ, ಡಿಡಿಪಿಐ ಆರ್.ಎಸ್. ಬುರಡಿ ಮಾತನಾಡಿದರು. ಎಸ್‌ಪಿ ಬಿ.ಎಸ್. ನೇಮಗೌಡ, ಕಮಲಮ್ಮ ಹನಮಂತಗೌಡ ಪಾಟೀಲ, ಎಸ್. ಆರ್. ಚಿಗರಿ, ಮಂಜುನಾಥ ಕುಸುಗಲ್ಲ, ಜಾಫರ ಬಚೇರಿ, ಡಿ.ಟಿ. ಪಾಟೀಲ ಅವರನ್ನು ಈ ಸಂದರ್ಭದಲ್ಲಿ ಸನ್ಮಾನಿಸಲಾಯಿತು. ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಶೇ.90ಕ್ಕಿಂತಲೂ ಹೆಚ್ಚು ಅಂಕ ಪಡೆದ ಶ್ರೀ ಜಗದ್ಗುರು ಅನ್ನದಾನೀಶ್ವರ ವಿದ್ಯಾಸಮಿತಿಯ 38ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ನಗದು ಮತ್ತು ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಲಿಂಗರಾಜ ಪಾಟೀಲ, ಬಿ.ಇ.ಓ ಹೆಚ್.ಎಂ. ಪಡ್ನೇಶಿ, ಕರಬಸಪ್ಪ ಹಂಚಿನಾಳ, ನಾಗೇಶ ಹುಬ್ಬಳ್ಳಿ, ಆರ್.ಎಲ್. ಪೊಲೀಸ್‌ಪಾಟೀಲ, ವೀರನಗೌಡ ಗುಡದಪ್ಪನವರ, ದೇವಪ್ಪ ರಾಮೇನಹಳ್ಳಿ, ಎಸ್.ಎಂ. ಅಗಡಿ, ಎಸ್.ಎಸ್. ಗಡ್ಡದ, ಎಂ.ಎಚ್. ಪೂಜಾರ, ಎಸ್.ಜಿ. ಕೋಲ್ಮಿ ಮುಂತಾದವರು ಉಪಸ್ಥಿತರಿದ್ದರು. ಡಾ. ಬಿ.ಜಿ. ಜವಳಿ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಶಿಕ್ಷಕರಾದ ಎಸ್.ಎಸ್. ಮಠದ, ಆರ್. ಆರ್. ಇನಾಮದಾರ ಕಾರ್ಯಕ್ರಮ ನಿರೂಪಿಸಿದರು. ನಾಗಭೂಷಣ ಹಿರೇಮಠ ವಂದಿಸಿದರು.

## ಕೆ.ಎಲ್.ಇ ಬಿ.ಫಾರ್ಮ ವಿದ್ಯಾರ್ಥಿಗಳ ಸಾಧನೆ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕೆ.ಎಲ್.ಇ ಸಂಸ್ಥೆಯ ಔಷಧ ಮಹಾವಿದ್ಯಾಲಯದ ಸೆಮಿಸ್ಟರ್ ಪರೀಕ್ಷೆಗಳ ಫಲಿತಾಂಶ ಪ್ರಕಟಗೊಂಡಿದ್ದು, ವಿವಿಧ ಸೆಮಿಸ್ಟರಗಳ ವಿದ್ಯಾರ್ಥಿಗಳು ತಮ್ಮ ಬುದ್ಧಿಮತ್ತೆ ಮತ್ತು ಪರಿಶ್ರಮದ ಮೂಲಕ ಉತ್ತಮ ಶ್ರೇಣಿಗಳನ್ನು ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ.



1ನೇ ಸೆಮಿಸ್ಟರ್ ವಿದ್ಯಾರ್ಥಿಗಳಾದ ಶಿವಾನಿ ಬಸವ, ಸೃಜನಾ ಮೊರಬದ, ಸಾಹಿಲ್ ನದಾಫ್, 3ನೇ ಸೆಮಿಸ್ಟರ್ ವಿದ್ಯಾರ್ಥಿಗಳಾದ ಭಾಗ್ಯ ದಾನಿ, ಸಾಕ್ಷಿ ಪಾಟೀಲ, ಪ್ರೀತಿ ಪಾಟೀಲ, 5ನೇ ಸೆಮಿಸ್ಟರ್ ವಿದ್ಯಾರ್ಥಿಗಳಾದ ಅಭಿಷೇಕ ಸಾತೆ, ದೀಪಕ ಮಟ್ಟಿ, ನಿಗಾರ ದರಗದ ಹಾಗೂ 7ನೇ ಸೆಮಿಸ್ಟರ್ ವಿದ್ಯಾರ್ಥಿಗಳಾದ ಕಾವ್ಯಾ ಕಲ್ಲಪ್ಪನವರ್, ದುರ್ಗಾಶ್ರೀ ಚಿಕ್ಕನ್ನವರ್, ವೈಷ್ಣವಿ ವೆಂಕನಗೌಡರ ಅತ್ಯುತ್ತಮ ಅಂಕಗಳನ್ನು ಗಳಿಸಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆ ಕಾಲೇಜಿನ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಿದೆ. ಅಲ್ಲದೆ, ಕೆ.ಎಲ್.ಇ ಸಂಸ್ಥೆಯ ಆಡಳಿತ ಮಂಡಳಿ ಹಾಗೂ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ರಮೇಶ ವ್ಹಿ ಮತ್ತು ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

## ಜೂ. 16ರಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯನ್ನು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜೂನ್ 16 ರಂದು ಬೆಳಿಗ್ಗೆ 11.00 ಗಂಟೆಗೆ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಬಿ. ಬಿ. ಅಸೂಟಿ ಅವರ ಅಧ್ಯಕ್ಷತೆಯಲ್ಲಿ ಏರ್ಪಡಿಸಲಾಗಿದೆ ಎಂದು ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಭರತ್ ಎಸ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



## ಪ್ರತಿಭಾ ಪುರಸ್ಕಾರಕ್ಕಾಗಿ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿ ಎಸ್.ಎಸ್.ಕೆ ತರುಣ ಸಂಘದ ವತಿಯಿಂದ ಜೂನ್ 22ರಂದು ಉಚಿತ ಪಠ್ಯ ಪುಸ್ತಕ ವಿತರಣೆ ಮತ್ತು ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

ಬೆಟಗೇರಿ ಭಾಗದ ಎಸ್. ಎಸ್.ಕೆ ಸಮಾಜದ 1ನೇ ತರಗತಿಯಿಂದ 10ನೇ ತರಗತಿಯ ವಿದ್ಯಾರ್ಥಿ-ವಿದ್ಯಾರ್ಥಿನಿಯರು ಅರ್ಜಿ ನಮೂನೆಯನ್ನು ಭರ್ತಿ ಮಾಡಿ ಬೆಟಗೇರಿ ತರುಣ ಸಂಘದ ಕಾರ್ಯಾಲಯದಲ್ಲಿ ಜೂ.20ರೊಳಗೆ ಸಲ್ಲಿಸಬೇಕು.

ಎಸ್.ಎಸ್.ಎಲ್.ಸಿ ಹಾಗೂ ದ್ವಿತೀಯ ಪಿಯುಸಿಯಲ್ಲಿ ಅತೀ ಹೆಚ್ಚು ಅಂಕ ಪಡೆದ ಬೆಟಗೇರಿ ಭಾಗದ ಎಸ್.ಎಸ್.ಕೆ ಸಮಾಜದ ವಿದ್ಯಾರ್ಥಿ-ವಿದ್ಯಾರ್ಥಿನಿಯರಿಗೆ ಪ್ರತಿಭಾ ಪುರಸ್ಕಾರವನ್ನು ನೀಡಲಾಗುವುದು. ಕಾರಣ, ವಿದ್ಯಾರ್ಥಿ/ವಿದ್ಯಾರ್ಥಿನಿಯರು ಅಂಕಪಟ್ಟಿಯ ಝರಾಕ್ಸ ಪ್ರತಿಯೊಂದಿಗೆ ಅರ್ಜಿಯನ್ನು ಬರೆದು ಕೊಡಬೇಕೆಂದು ಎಸ್. ಎಸ್.ಕೆ ತರುಣ ಸಂಘದ ಗೌರವ ಕಾರ್ಯದರ್ಶಿ ರಾಜು ಜಿ ಬಸವಾ ಇವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಉಭಯ ಶ್ರೀಗಳ ಜಾತ್ರಾ ಮಹೋತ್ಸವ

## ಧರ್ಮಸಭೆ, ಕೀರ್ತನ ಸಮ್ಮೇಳನ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಪರಮಪೂಜ್ಯ ಲಿಂ. ಪಂ. ಪಂಚಾಕ್ಷರಿ ಗವಾಯಿಗಳವರ 81ನೇ ಹಾಗೂ ಪದ್ಮಭೂಷಣ ಲಿಂ.ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳವರ 15ನೇ ಪುಣ್ಯಸ್ಮರಣೋತ್ಸವ ಹಾಗೂ ಉಭಯ ಗುರುಗಳ ಜಾತ್ರಾ ಮಹೋತ್ಸವದ ಅಂಗವಾಗಿ ಜೂನ್ 13ರಂದು ಸಂಜೆ 6 ಗಂಟೆಗೆ ವೀರೇಶ್ವರ ಪುಣ್ಯಾಶ್ರಮದಲ್ಲಿ ಧರ್ಮಸಭೆ, ಕೀರ್ತನ ಸಮ್ಮೇಳನ ಹಾಗೂ ಅಂಧರಗೋಷ್ಠಿ ಜರುಗುವುದು.

ಶಿರಹಟ್ಟಿಯ ಜ. ಫಕೀರ ದಿಂಗಾಲೇಶ್ವರ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸುವರು. ಅಡ್ನೂರ-ರಾಜೂರ-ಗದಗ ಬ್ರಹನ್ಮಠದ ಪೂಜ್ಯಶ್ರೀ ಅಭಿನವ ಶಿವಾನಂದ ಮಹಾಸ್ವಾಮಿಗಳು ಅಧ್ಯಕ್ಷತೆ ವಹಿಸುವರು. ಹೊತನಹಳ್ಳಿ ಸಿಂದಗಿ ಶಾಖಾಮಠದ ಪೂಜ್ಯಶ್ರೀ ಶಂಭುಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು ನೇತೃತ್ವ ವಹಿಸುವರು. ಗದುಗಿನ ನೀಲಕಂಠ ಪಟ್ಟದಾರ್ಯ ಮಹಾಸ್ವಾಮಿಗಳು, ಮುಕ್ಕಣ್ಣೇಶ್ವರ ಮಠದ ಪೂಜ್ಯಶ್ರೀ ಶಂಕರಾನಂದ ಸ್ವಾಮಿಗಳು, ಬೆಳಹೊಡದ ಪೂಜ್ಯಶ್ರೀ ಪರಿಪೂರ್ಣಾನಂದ ಭಾರತಿ ಮಹಾಸ್ವಾಮಿಗಳು, ಮುದ್ದೇಬಿಹಾಳದ ಪೂಜ್ಯಶ್ರೀ ಡಾ. ಮಲ್ಲಿಕಾರ್ಜುನ ಮಹಾಸ್ವಾಮಿಗಳು, ಅಂತೂರು-ಬೆಂತೂರಿನ ಪೂಜ್ಯಶ್ರೀ ಕುಮಾರದೇವರು, ಲಿಂಗಸೂರಿನ ಪೂಜ್ಯಶ್ರೀ ಶಿವಶರಣೆ ನಂದೀಶ್ವರಿ ಅಮ್ಮನವರು ಸಮ್ಮುಖ ವಹಿಸುವರು.





ಮುಖ್ಯ ಅತಿಥಿಗಳಾಗಿ ಸಂಸದ ಬಸವರಾಜ ಬೊಮ್ಮಾಯಿ, ಮಾಜಿ ಸಚಿವ ಕಳಕಪ್ಪ ಬಂಡಿ, ಧಾರವಾಡ ಕೆಸಿಸಿ ಬ್ಯಾಂಕ್ ಅಧ್ಯಕ್ಷ ಶಿವಕುಮಾರ ಪಾಟೀಲ, ಕನಕದಾಸ ಶಿಕ್ಷಣ ಸಮಿತಿಯ ಅಧ್ಯಕ್ಷ ರವೀಂದ್ರನಾಥ್ ದಂಡಿನ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಹಿರೇಮಠ, ಡಿಡಿಪಿಐ ಆರ್.ಎಸ್. ಬುರುಡಿ, ಗ್ಯಾರಂಟಿ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಬಿ.ಬಿ. ಅಸೂಟಿ, ಜಯಶ್ರೀ ಉಗಲಾಟದ, ಶಿವಲೀಲಾ ಅಕ್ಕಿ, ಡಾ. ರಾಜೇಂದ್ರ ಬಸರಿಗಿಡದ, ನಗರಸಭೆ ಸದಸ್ಯರಾದ ಅನಿತಾ ಅಸೂಟಿ, ಜಿ.ಪಂ ಮಾಜಿ ಸದಸ್ಯ ಶಿವಪ್ರಕಾಶ ಮಹಾಜನಶೆಟ್ರು, ಪ್ರಭು ದಂಡಾತಿಮಠ, ಆನಂದಯ್ಯ ವಿರಕ್ತಮಠ, ಪಂಕಜ ಬಾಪಣಾ, ಶಿವರುದ್ರಪ್ಪ ಇಟಗಿ, ಬಲರಾಮ ಬಸವಾ, ಡಾ. ಆನಂದ ಪಾಂಡುರಂಗಿ, ಬಸವರಾಜ ಬಿಂಗಿ, ಎಸ್.ಎಂ. ಗೌಡರ, ಸಾದಿಕ್ ನರಗುಂದ, ವಿಕ್ರಂ ಜೈನ, ಅಯ್ಯಪ್ಪ ನಾಯ್ಕರ, ಮಲ್ಲಾಪುರದ ಗುಂಡಪ್ಪ ಕಬ್ಬಿಣದ ಭಾಗವಹಿಸುವರು. ಪೂಜ್ಯಶ್ರೀ ಡಾ. ಕಲ್ಲಯ್ಯಜ್ಜನವರು ಅಭಾರ ಮನ್ನಣೆ ಮಾಡುವರು.

ಇದೇ ಸಂದರ್ಭದಲ್ಲಿ ನಾಗನೂರಿನ ದಾಲಾಸಾಬ (ಪಾಪಾ), ಬೆಳವಣಿಕೆಯ ಮುತ್ತಪ್ಪ ಶೆಗಣ, ನಾಗರಾಜ ನಾಗನೂರ, ಪ್ರಾಚಾರ್ಯ ಶಶಿಧರ ನರಗುಂದ, ಶರಣಪ್ಪ ಕುಸುಗಲ್, ಯೋಗೇಶ ಗಡಗಿ, ನಾಗರಾಜ ಪಾಟೀಲ, ಆನಂದ ತಮನಾಳ, ಗದುಗಿನ ಆಂಜನೇಯ ಬಳ್ಳಾರಿ, ನರಗುಂದದ ಉಮೇಶಗೌಡ್ರ ಪಾಟೀಲ, ವೀರೇಶ ಹೆಬಸೂರ, ದಾನೇಶ ಗುಜಮಾಗಡಿ ಅವರನ್ನು ಸನ್ಮಾನಿಸಲಾಗುವುದು.

ರಾತ್ರಿ 10.30 ಗಂಟೆಗೆ ಶ್ರೀ ಕುಮಾರೇಶ್ವರ ಕೃಪಾಪೋಷಿತ ಪಂ. ಪಂಚಾಕ್ಷರ ಗವಾಯಿಗಳವರ ನಾಟ್ಯ ಸಂಘದಿಂದ 'ಬಂದರ ನೋಡ ಬಂಗಾರಿ' ನಾಟಕ ಪ್ರದರ್ಶನಗೊಳ್ಳಲಿದೆ. ಈ ಕಾರ್ಯಕ್ರಮದಲ್ಲಿ ಅಡ್ನೂರ-ರಾಜೂರ-ಗದಗ ಬ್ರಹನ್ಮಠದ ಪೂಜ್ಯಶ್ರೀ ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸುವರು. ಪೂಜ್ಯಶ್ರೀ ಕಲ್ಲಯ್ಯಜ್ಜನವರು ಅಧ್ಯಕ್ಷತೆ ವಹಿಸುವರು. ವೀರೇಶ್ವರ ಪುಣ್ಯಾಶ್ರಮ ಸೋಲ್ ಟ್ರಸ್ಟ್‌ನ ಸದಸ್ಯ ವಸಂತಗೌಡ ಪೊಲೀಸ್‌ಪಾಟೀಲ ಕಾರ್ಯಕ್ರಮ ಉದ್ಘಾಟಿಸುವವರು. ಮುಖ್ಯ ಅತಿಥಿಗಳಾಗಿ ವೀರೇಶ್ವರ ಪುಣ್ಯಾಶ್ರಮ ಸೋಲ್‌ನ ಉಪಾಧ್ಯಕ್ಷ ಪ್ರಕಾಶ ಬಸರಿಗಿಡದ ಉಪಸ್ಥಿತರಿರುವರು ಎಂದು ಶ್ರೀಮಠದ ಪ್ರಕಟಣೆ ತಿಳಿಸಿದೆ.

ಬೆಳಿಗ್ಗೆ 11 ಗಂಟೆಗೆ ಜರುಗುವ ಸನ್ಮಾನ ಕಾರ್ಯಕ್ರಮದಲ್ಲಿ ಕಪೋತಗಿರಿಯ ನಂದಿವೇರಿ ಸಂಸ್ಥಾನ ಮಠದ ಪೂಜ್ಯಶ್ರೀ ಶಿವಕುಮಾರ ಮಹಾಸ್ವಾಮಿಗಳು ದಿವ್ಯ ಸಾನ್ನಿಧ್ಯ ವಹಿಸುವರು. ಅಡ್ನೂರ-ರಾಜೂರ-ಗದಗ ಬ್ರಹನ್ಮಠದ ಪೂಜ್ಯಶ್ರೀ ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು ಅಧ್ಯಕ್ಷತೆ ವಹಿಸುವರು. ವೀರೇಶ್ವರ ಪುಣ್ಯಾಶ್ರಮದ ಪೂಜ್ಯಶ್ರೀ ಡಾ. ಕಲ್ಲಯ್ಯಜ್ಜನವರು ಸಮ್ಮುಖ ವಹಿಸುವರು.

## ಯೋಗ ದಿನಾಚರಣೆ ವ್ಯವಸ್ಥಿತವಾಗಿ ಆಚರಿಸಿ


▶▶ಮೊದಲನೇ ಪುಟದಿಂದ

ಔಷಧಿ ಸಸಿಗಳನ್ನು ನೆಡಲಾಗುವುದು. ಆಯುಷ್ ಇಲಾಖೆಯಿಂದ ಜಿಲ್ಲೆಯ ಇಟಗಿ, ಸೊರಟೂರು, ಕೋಟುಮಚಗಿ, ಯಾವಗಲ್, ಪೇಠಾಲೂರು, ಬಿದರಳ್ಳಿ, ಮೇವುಂಡಿ, ಅಂತೂರು-ಬೆಂತೂರು ಈ ಗ್ರಾಮಗಳಲ್ಲಿ ಯೋಗ ದಿನಾಚರಣೆ ಹಮ್ಮಿಕೊಳ್ಳಲಾಗಿದೆ ಎಂದರು.

ಸಭೆಯಲ್ಲಿ ಯೋಗ ದಿನಾಚರಣೆಯ ದಿನದಂದು ಕುಡಿಯುವ ನೀರಿನ ವ್ಯವಸ್ಥೆ, ಉಪಹಾರ ವ್ಯವಸ್ಥೆ, ಅಂಬುಲೆನ್ಸ್ ವ್ಯವಸ್ಥೆ ಕುರಿತು ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಸತೀಶ ನೀಲಗುಂದ, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಬಿ. ಮಸನಾಯಕ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಂಘ-ಸಂಸ್ಥೆಯವರು, ಯೋಗಾಸಕ್ತರು ಹಾಜರಿದ್ದರು.

## ಕಾಲ್ತುಳಿತ ಕೇಸ್: ಆರ್‌ಸಿಬಿ ಮಾರ್ಕೆಟಿಂಗ್ ಹೆಡ್ ಗೆ ರಿಲೀಫ್ ಕೊಟ್ಟ ಹೈಕೋರ್ಟ್.. ಷರತ್ತುಬದ್ಧ ಜಾಮೀನು ಮಂಜೂರು!



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು


ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕಳೆದ ಜೂನ್ 4 ರಂದು ಸಂಭವಿಸಿದ್ದ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಬಂಧನಕ್ಕೆ ಒಳಗಾಗಿದ್ದ ಆರ್‌ಸಿಬಿ ಫ್ರಾಂಚೈಸಿಯ ಮಾರ್ಕೆಟಿಂಗ್ ಹೆಡ್ ನಿಖಿಲ್ ಸೋಸಲೆ ಸೇರಿ ನಾಲ್ವರಿಗೆ ಷರತ್ತುಬದ್ಧ ಜಾಮೀನು ಮಂಜೂರು ಮಾಡಿ ಹೈಕೋರ್ಟ್ ಆದೇಶ ಹೊರಡಿಸಿದೆ.

ಪ್ರಕರಣದಲ್ಲಿ ನಿಖಿಲ್ ಸೋಸಲೆ, ಸುನೀಲ್ ಮ್ಯಾಥ್ಯೂ ಬಂಧನ ಪ್ರಶ್ನಿಸಿ ಸಲ್ಲಿಸಿದ್ದ ಅರ್ಜಿಯನ್ನು ಗುರುವಾರ ವಿಚಾರಣೆ ನಡೆಸಿದ ಹೈಕೋರ್ಟ್‌ನ ನ್ಯಾ. ಕೃಷ್ಣಕುಮಾರ್ ಅವರಿದ್ದ ಪೀಠ ನಿಖಿಲ್ ಸೋಸಲೆ, ಸುನೀಲ್ ಮ್ಯಾಥ್ಯೂ, ಕಿರಣ್, ಶಮಂತ್ ಎಲ್ಲರಿಗೂ ಷರತ್ತುಬದ್ಧ ಜಾಮೀನು ಮಂಜೂರು ಮಾಡಿ ಆದೇಶಿಸಿದೆ. ಅಲ್ಲದೇ ದೇಶ ಬಿಟ್ಟು ಹೋಗದಂತೆ ಷರತ್ತು ವಿಧಿಸಿದೆ. ಅರ್ಜಿದಾರರ ಪರ ವಕೀಲ ಸಂದೇಶ್ ಚೌಟ ವಾದ ಮಂಡಿಸಿದರು.

## ಬೆಣ್ಣೆಹಳ್ಳ ಹರಿವಿನ ಗ್ರಾಮಗಳಲ್ಲಿ ಕಟ್ಟೆಚ್ಚರ

▶▶ಮೊದಲನೇ ಪುಟದಿಂದ

ಚರಂಡಿ ಹಾಗೂ ಪ್ರಮುಖ ಕಾಲುವೆಗಳ ಮೂಲಕ ಸರಾಗವಾಗಿ ಮುಂದೆ ಸಾಗುವಂತೆ ಇರುವ ಗಿಡ-ಕಂಟೆ, ಪ್ಲಾಸ್ಟಿಕ್ ತೆರವುಗೊಳಿಸಬೇಕು. ಇದರಿಂದ ವಿನಾಕಾರಣ ಮಳೆ ನೀರು ಮನೆಗಳಿಗೆ ನುಗ್ಗುವುದನ್ನು ತಡೆಯಬಹುದಾಗಿದೆ. ಜಿಲ್ಲಾ ಮಟ್ಟದ ಅಧಿಕಾರಿಗಳು ಸೇರಿದಂತೆ ಎಲ್ಲರೂ ಕೇಂದ್ರ ಸ್ಥಾನದಲ್ಲಿದ್ದು ಅತೀವೃಷ್ಟಿ, ಪ್ರವಾಹ ಪರಿಸ್ಥಿತಿ ಎದುರಾದಲ್ಲಿ ಸಮರ್ಪಕವಾಗಿ ಎದುರಿಸಬೇಕು. ಜನ-ಜಾನುವಾರುಗಳ ಜೀವ ಹಾನಿ ತಡೆಯುವುದರೊಂದಿಗೆ ಆಸ್ತಿ ರಕ್ಷಣೆ ಮಾಡಬೇಕೆಂದು ಹೇಳಿದರು. ಈ ಹಿಂದೆ ಅಧಿಕ ಪ್ರಮಾಣದ ಪ್ರವಾಹ ಪರಿಸ್ಥಿತಿ ಎದುರಾದಾಗ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸಿದ ಅನೇಕ ಅಧಿಕಾರಿಗಳು ಅನುಭವ ಹೊಂದಿದವರಾಗಿದ್ದಾರೆ. ಪ್ರವಾಹ ಪರಿಸ್ಥಿತಿಯನ್ನು ಅತ್ಯಂತ ಅಚ್ಚುಕಟ್ಟಾಗಿ ನಿರ್ವಹಿಸಲು ಎಲ್ಲ ಅಧಿಕಾರಿಗಳು ಸನ್ನದ್ಧರಾಗಬೇಕೆಂದು ಸೂಚಿಸಿದರು.



ನವಿಲುತೀರ್ಥ ಡ್ಯಾಂ 37.731 ಟಿಎಂಸಿ ನೀರು ಸಂಗ್ರಹಣಾ ಸಾಮರ್ಥ್ಯ ಹೊಂದಿದ್ದು, ನವಿಲುತೀರ್ಥ ಡ್ಯಾಮ್‌ನಿಂದ ಅಪಾರ ಪ್ರಮಾಣದ ನೀರು ಬಿಟ್ಟಲ್ಲಿ ಮುಂದಿನ 18 ಗಂಟೆಯೊಳಗಾಗಿ ನೀರು ಜಿಲ್ಲೆಗೆ ಪ್ರವೇಶ ಮಾಡಲಿದ್ದು, ಡ್ಯಾಂನಿಂದ ನೀರು ಹೊರಬಿಡುವ ಮಾಹಿತಿ ದೊರೆತ ತಕ್ಷಣ ತಾಲೂಕಾಡಳಿತಗಳು ಪ್ರವಾಹ ಪೀಡಿತಕ್ಕೊಳಗಾಗುವ ಗ್ರಾಮಗಳಲ್ಲಿ ಕಟ್ಟೆಚ್ಚರ ವಹಿಸುವ ಮೂಲಕ ಆಗುವ ಜೀವ ಹಾನಿ ತಪ್ಪಿಸಬೇಕು ಎಂದರು.

ನವಲಗುಂದ ಸೇರಿದಂತೆ 5 ತಾಲೂಕುಗಳ ಮಳೆಯಿಂದ ಅಪಾರ ಪ್ರಮಾಣದ ನೀರು ಬೆಣ್ಣೆಹಳ್ಳ ತಲುಪಿ ಅಲ್ಲಿಂದ ಜಿಲ್ಲೆಗೆ ಒಮ್ಮೆಲೇ ನೀರು ಹರಿದು ಬರಲಿದೆ. ಇದರಿಂದ ನರಗುಂದ ಹಾಗೂ ರೋಣ ತಾಲೂಕಿನ ಹಲವು ಗ್ರಾಮಗಳು ಪ್ರವಾಹಕ್ಕೊಳಗಾಗುವ ಸಂಭವವಿದ್ದು, ಈಗಾಗಲೇ ತಾಲೂಕಾ ಆಡಳಿತ ಅಂತಹ ಗ್ರಾಮಗಳನ್ನು ಗುರುತಿಸಿದೆ. ನೀರಿನ ಪ್ರಮಾಣಕ್ಕನುಗುಣವಾಗಿ ಅಧಿಕಾರಿಗಳು ಪ್ರವಾಹ ಪರಿಸ್ಥಿತಿಯನ್ನು ಸರಿಯಾಗಿ ನಿಭಾಯಿಸಬೇಕು ಎಂದು ನಿರ್ದೇಶಿಸಿದರು. ಪ್ರವಾಹ ಪರಿಸ್ಥಿತಿ ತಲೆದೋರಿದಲ್ಲಿ ಅಗ್ನಿಶಾಮಕ ಇಲಾಖೆ ತಂಡ ತಕ್ಷಣ ಕಾರ್ಯಪ್ರವೃತ್ತವಾಗಬೇಕು. ತಾಲೂಕಾಡಳಿತದೊಂದಿಗೆ ವಿವಿಧ ಇಲಾಖೆ ಅಧಿಕಾರಿಗಳು ಸಮನ್ವಯ ಸಾಧಿಸುವ ಮೂಲಕ ಪ್ರವಾಹ ಪರಿಸ್ಥಿತಿ ನಿರ್ವಹಣೆ ಮಾಡಬೇಕು. ತಗ್ಗುಪ್ರದೇಶಗಳಲ್ಲಿ ಹಾಗೂ ಶಿಥಿಲಾವಸ್ಥೆಯಲ್ಲಿರುವ ಮಣ್ಣಿನ ಮನೆಗಳಲ್ಲಿ ವಾಸಿಸುವವರನ್ನು ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಸೂಚಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.

ಉಪವಿಭಾಗಾಧಿಕಾರಿ ಗಂಗಪ್ಪ ಎಂ ಮಾತನಾಡಿ, ಪ್ರವಾಹ ಪರಿಸ್ಥಿತಿ ನಿರ್ವಹಣೆಗೆ ಈಗಾಗಲೇ ಪೂರ್ವಸಿದ್ಧತೆ ಮಾಡಿಕೊಳ್ಳಲಾಗಿದೆ. ಜನಜಾನುವಾರು ಸ್ಥಳಾಂತರಕ್ಕೆ ಸ್ಥಳ ಗುರುತಿಸಿಟ್ಟುಕೊಳ್ಳಲಾಗಿದೆ. ಮೊದಲು ಪ್ರವಾಹಕ್ಕೀಡಾಗುವ ಗ್ರಾಮಗಳ ಪಟ್ಟಿಯನ್ನು ಮಾಡಿಟ್ಟುಕೊಂಡಿದ್ದು ಸಂದರ್ಭಕ್ಕನುಸಾರವಾಗಿ ಸಮರ್ಪಕವಾಗಿ ಪ್ರವಾಹ ನಿರ್ವಹಣೆಗೆ ಕ್ರಮ ವಹಿಸಲಾಗುವುದು ಎಂದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ ಸೇರಿದಂತೆ ತಾಲೂಕಾ ತಹಸೀಲ್ದಾರರು, ಕಾರ್ಯನಿರ್ವಾಹಕ ಅಧಿಕಾರಿಗಳು, ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು, ತಾಲೂಕಾ ನೋಡಲ್ ಅಧಿಕಾರಿಗಳು ಉಪಸ್ಥಿತರಿದ್ದರು.

## ನೂರು ಶಬ್ದಕ್ಕಿಂತ ಒಂದು ಚಿತ್ರ ಪ್ರಭಾವಶಾಲಿ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಒಂದು ವಿಷಯವನ್ನು ನಾವು ನೂರು ಶಬ್ದಗಳಲ್ಲಿ ಹೇಳಬೇಕಾದುದನ್ನು ಒಂದೇ ಒಂದು ಚಿತ್ರ ಎಲ್ಲವನ್ನೂ ನೋಡುಗನಿಗೆ ತಿಳಿಸುತ್ತದೆ. ಆದ್ದರಿಂದ ನೀವು ಚಿತ್ರಕಲೆಯಲ್ಲಿ ವಿಶೇಷ ಆಸಕ್ತಿಯನ್ನು ಬೆಳೆಸಿಕೊಳ್ಳಿ ಎಂದು ಮುಖ್ಯ ಶಿಕ್ಷಕ ಸಂಗಮೇಶ ಹೂಲಗೇರಿ ಹೇಳಿದರು.

ಪಟ್ಟಣದ ಎಸ್.ಎ.ವಿ ಬಾಲಕಿಯರ ಪ್ರೌಢಶಾಲೆಯ ಮಕ್ಕಳು ಪ್ರದರ್ಶಿಸಿದ ಪರಿಸರದ ಚಿತ್ರ ಪ್ರದರ್ಶನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪರಿಸರದ ಬಗ್ಗೆ ನಿಮಗಿರುವ ಕಾಳಜಿಯನ್ನು ಈ ಚಿತ್ರಗಳು ತೋರಿಸುತ್ತವೆ. ನಿಮಗೆ ಓದಿ ಓದಿ ಬೇಸರವಾದಾಗ ನೀವು ವಿರಾಮಕ್ಕೆಂದು ಈ ಚಿತ್ರಗಳನ್ನು ಬಿಡಿಸುವ ರೂಢಿಯನ್ನು ಬೆಳೆಸಿಕೊಳ್ಳಿ. ಇದರಿಂದ ಪರೀಕ್ಷೆಯಲ್ಲಿ ಅತ್ಯುತ್ತಮ ಅಂಕಗಳನ್ನು ಪಡೆಯಬಹುದು. ನಿಮ್ಮ ಅಧ್ಯಯನಕ್ಕೆ ಪೂರಕವಾಗುವಂತೆ ಈ ಚಿತ್ರ ರಚನಾ ಕ್ರಿಯೆಯನ್ನು ಮುಂದುವರೆಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸಿರಿ ಎಂದರು.

ಉತ್ತಮ ಚಿತ್ರಗಳಿಗೆ ಬಹುಮಾನಗಳನ್ನು ವಿತರಿಸಲಾಯಿತು. ಈ ಸಂದರ್ಭದಲ್ಲಿ ಶಿಕ್ಷಕರಾದ ಬಿ.ಖ. ಯರಗೊಪ್ಪ, ಎಸ್.ಶಿವಮೂರ್ತಿ, ಶಿಕ್ಷಕಿಯರಾದ ಎಸ್.ಎಫ್. ಧರ್ಮಾಯತ, ಆರ್.ಎಸ್. ಗುಳಬಾಳ ಇತರರಿದ್ದರು.

## ನಿಧನ

### ಪಾರವ್ವ ಯಲಿಶೆಟ್ಟರ



ಹುಲಕೋಟಿ: ಇಲ್ಲಿನ ವಾಲ್ಮೀಕಿ ಸಮಾಜದ ಹಿರಿಯರಾದ ಶ್ರೀಮತಿ ಪಾರವ್ವ ಕೋಂ ಹನಮಂತಪ್ಪ ಯಲಿಶೆಟ್ಟರ ಇವರು ತಮ್ಮ 95ನೇ ವಯಸ್ಸಿನಲ್ಲಿ ಜೂನ್ 10ರಂದು ನಿಧನರಾದರು. ಮೃತರು 8 ಜನ ಪುತ್ರರು, ನಾಲ್ಕು ಜನ ಪುತ್ರಿಯರು, ಸೊಸೆಯಂದಿರು, ಅಳಿಯಂದಿರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

ಸಂತಾಪ: ಶ್ರೀಮತಿ ಪಾರವ್ವ ಯಲಿಶೆಟ್ಟರ ಅವರ ನಿಧನಕ್ಕೆ ಸಚಿವರಾದ ಎಚ್.ಕೆ. ಪಾಟೀಲ, ಮಾಜಿ ಶಾಸಕ ಡಿ.ಆರ್. ಪಾಟೀಲ, ಎಮ್.ಆರ್. ಪಾಟೀಲ, ಜಿ.ಪಂ ಮಾಜಿ ಸದಸ್ಯ ಆರ್.ಡಿ. ಕೊಂಡಿಕೊಪ್ಪ, ವಾಯ್.ಬಿ. ಕರಿಕಟ್ಟಿ, ಸಿ.ಬಿ. ಕರಿಕಟ್ಟಿ, ಮೋಹನ ದುರುಗಣ್ಣವರ ಮುಂತಾದವರು ಸಂತಾಪ ಸೂಚಿಸಿದ್ದಾರೆ.

### ಕುಂದ್ರಳ್ಳಿಯ 24 ಮನೆಗಳಿಗೆ ನುಗ್ಗಿದ ಮಳೆ ನೀರು । ನೀರು ಹೊರಹಾಕಲು ಕುಟುಂಬಸ್ಥರ ಪರದಾಟ

# ಮೃಗಶಿರೆ ಅಬ್ಬರಕ್ಕೆ ನಲುಗಿದ ಜನತೆ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮೃಗಶಿರಾ ಮಳೆಯ ಅಬ್ಬರಕ್ಕೆ ಜನತೆ ನಲುಗಿಹೋಗಿದ್ದು, ಕುಂದ್ರಳ್ಳಿ ಗ್ರಾಮವಂತೂ ಅಕ್ಷರಶಃ ನೀರಿನಲ್ಲಿ ನಿಂತಂತಾಗಿದೆ. ತಾಲೂಕಿನ ಹರದಗಟ್ಟಿ ಗ್ರಾಮದಲ್ಲಿ ಸುಮಾರು 30 ಎಕರೆಯಲ್ಲಿ ಮಳೆಯ ನೀರು ನಿಂತುಕೊಂಡು ಬೆಳೆಯುತ್ತಿರುವ ಮೆಕ್ಕೆಜೋಳ ಬೆಳೆ ಕೊಳೆಯುವ ಭೀತಿ ರೈತರನ್ನು ಕಾಡುತ್ತಿದೆ.

ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಯ ಮೇಲ್ಭಾಗದಿಂದ ಅಪಾರ ಪ್ರಮಾಣದ ಮಳೆ ನೀರು ತಗ್ಗು ಪ್ರದೇಶಗಳಲ್ಲಿನ 24 ಮನೆಗಳಿಗೆ ನುಗ್ಗಿ ಅವಾಂತರ ಸೃಷ್ಟಿ ಮಾಡಿತು. ಇಕ್ಕಟ್ಟಾದ ರಸ್ತೆಗಳೆಲ್ಲವೂ ನೀರಿನಿಂದ ಆವೃತ್ತವಾಗಿದ್ದವು. ಚರಂಡಿಗಳು ಮುಚ್ಚಿಕೊಂಡಿದ್ದರಿಂದ ನೀರು ನೇರವಾಗಿ ರಸ್ತೆಯಿಂದ ತಗ್ಗು ಪ್ರದೇಶಗಳಿಗೆ ನುಗ್ಗಿ ಅನೇಕ ಮನೆಗಳು ನೀರಿನಲ್ಲಿ ನಿಲ್ಲುವಂತಾಗಿದೆ. ರಾತ್ರಿಯ ವೇಳೆಗೆ ಈ ವಿಷಯ ತಿಳಿದ ತಾಲೂಕಿನ ತಹಸೀಲ್ದಾರ ವಾಸುದೇವ ಸ್ವಾಮಿ ಅವರು ರಾತ್ರಿ 11 ಗಂಟೆಯಾಗಿದ್ದರೂ ಸ್ಥಳಕ್ಕೆ ತೆರಳಿ ನೀರು ನುಗ್ಗಿದ ಮನೆಗಳ ಪರಿಶೀಲನೆ ನಡೆಸಿದರು.

ಮನೆಗಳಿಗೆ ನೀರು ನುಗ್ಗಿದ್ದರಿಂದ ರಾತ್ರಿಯಿಡೀ ನೀರು ಹೊರಹಾಕಲು ಕುಟುಂಬಸ್ಥರು ಪರದಾಡಿದರು. ನಂತರ ತಹಸೀಲ್ದಾರರು ಸರಕಾರಿ ಶಾಲೆಯಲ್ಲಿ ಆಯಾ ಕುಟುಂಬಗಳಿಗೆ ತಂಗಲು ಸ್ಥಳಾವಕಾಶ ಕಲ್ಪಿಸಿಕೊಟ್ಟರು. ಈ ಸಂದರ್ಭದಲ್ಲಿ ಪಿಡಿಒ ಎಂ.ಎನ್. ಮಾದರ ಹಾಗೂ ಗ್ರಾಮ ಪಂಚಾಯಿತಿ ಸದಸ್ಯರೊಂದಿಗೆ ಸಮಸ್ಯೆ ಪರಿಹಾರದ ಕುರಿತು ಚರ್ಚಿಸಿದರು. ಗ್ರಾಮದ ಚೆನ್ನವೀರಪ್ಪ ಪಲ್ಲೇದ, ಚನ್ನಬಸವ್ವ ಹಾಲಪ್ಪ ಹೂಗಾರ, ನೀಲವ್ವ ಫಕ್ಕೀರೇಶ



ಹೂಗಾರ, ನಿಂಗವ್ವ ಯಲ್ಲಪ್ಪ ಗೌರಿ, ಬಸನಗೌಡ ಪಾಟೀಲ, ಗೋಣೆಪ್ಪಗೌಡ ಪಾಟೀಲ, ಚಿಕ್ಕುಸಾಬ್ ನದಾಫ್, ದುದ್ದುಸಾಬ್ ನದಾಫ್ ಸೇರಿದಂತೆ 24 ಮನೆಗಳಿಗೆ ನೀರು ನುಗ್ಗಿತ್ತು. ನಿಂಗವ್ವ ಫಕ್ಕೀರೇಶ ಗೌರಿ ಅವರು ಮನೆಯೊಳಗೆ ನೀರು ಬರದಂತೆ ಉಸುಕು ತುಂಬಿದ ಚೀಲಗಳನ್ನು ಬಾಗಿಲಿಗೆ ಅಡ್ಡ ಇಟ್ಟಿದ್ದರೂ ನೀರು ಚೀಲಗಳ ಮೇಲಿಂದ ಮನೆಗೆ ನುಗ್ಗಿದೆ. ಏಕಾಏಕಿ ಮಳೆ ನೀರು ಮನೆಗೆ ನುಗ್ಗಿದ್ದರಿಂದ ಏನು ಮಾಡಬೇಕು ಎಂಬುದೇ ತಿಳಿಯಲಿಲ್ಲ. ಮನೆಯಲ್ಲಿ ಇದ್ದವರೆಲ್ಲ ಹೆದರಿದ್ದೆವು ಎಂದು ನೀಲವ್ವ ಹೂಗಾರ ಪರಿಸ್ಥಿತಿಯನ್ನು ವಿವರಿಸಿದರು.

ನೋಡಲ್ ಅಧಿಕಾರಿ ಅಮಿತ್



ಬಿದರಿ, ತಹಸೀಲ್ದಾರ ವಾಸುದೇವ ಸ್ವಾಮಿ, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣಪ್ಪ ಧರ್ಮರ, ಪಿಡಿಒ ಎಂ.ಎನ್. ಮಾದರ, ಕಂದಾಯ ನಿರೀಕ್ಷಕ ನದಾಫ್, ಗ್ರಾಮ ಆಡಳಿತಾಧಿಕಾರಿ ಮಲ್ಲಿಗವಾಡ ಮತ್ತಿತರ ಅಧಿಕಾರಿಗಳ ತಂಡ ಗುರುವಾರ ಕುಂದ್ರಳ್ಳಿ ಗ್ರಾಮಕ್ಕೆ ತೆರಳಿ ಪರಿಸ್ಥಿತಿಯನ್ನು ಅವಲೋಕಿಸಿದರು.

ಈ ಸಂದರ್ಭದಲ್ಲಿ ತಹಸೀಲ್ದಾರ ವಾಸುದೇವ ಸ್ವಾಮಿ ಮಾಹಿತಿ ನೀಡಿ, ಮಳೆ ಬಂದು ಮನೆಗಳಿಗೆ ನೀರು ನುಗ್ಗಿದ ಸಂದರ್ಭದಲ್ಲಿ ಸಂತ್ರಸ್ತ ನಿವಾಸಿಗಳಿಗಾಗಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕಾಳಜಿ ಕೇಂದ್ರ ತೆರೆಯಲು ಸೂಚನೆ ನೀಡಲಾಗಿದೆ. ಅದರೊಂದಿಗೆ ಮನೆಗಳಿಗೆ ನೀರು ನುಗ್ಗದಂತೆ ಶಾಶ್ವತ ಪರಿಹಾರ ಕಂಡುಕೊಳ್ಳುವ ಕುರಿತು ಗ್ರಾಮ ಪಂಚಾಯಿತಿ ಸದಸ್ಯರು, ಪಿಡಿಒ ಅವರೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.



## ಗಜಲ್‌ನಿಂದ ವಿಶಿಷ್ಟ ಕಾವ್ಯಾನುಭವ



**■ವಿಜಯಸಾಕ್ಷಿ ಸುದ್ದಿ, ಗದಗ**

ಕನ್ನಡ ಸಾಹಿತ್ಯದಲ್ಲಿ ಗಜಲ್ ಕಾವ್ಯ ಪ್ರಕಾರವು ಹುಲುಸಾಗಿ ಬೆಳೆಯುತ್ತಿದೆ. ಗಜಲ್‌ಗಳು ಸಹೃದಯನಲ್ಲಿ ವಿಶಿಷ್ಟ ಕಾವ್ಯಾನುಭವವನ್ನು ಉಂಟುಮಾಡುತ್ತವೆ. ಷಟ್ಪದಿ, ಸಾಂಗತ್ಯ, ತ್ರಿಪದಿಗಳಿಗೆ ಇರುವಂತೆ ಗಜಲ್ ರಚನೆಗೂ ಅನೇಕ ನಿಯಮಗಳಿವೆ. ಗಜಲ್‌ನ ಸೂಕ್ಷ್ಮತೆಗಳನ್ನು ಅರಿತು ರಚನೆಯಲ್ಲಿ ತೊಡಗಬೇಕೆಂದು ವಿನಾಯಕ ಕಮತದ ತಿಳಿಸಿದರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಜರುಗಿದ ಸಂಶೋಧನಾ ಕೃತಿಗಳ ಪರಿಚಯಾತ್ಮಕ 'ಮಹಾ ಮಾತು' ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಶಾಂತರಸ, ಮುಕ್ತಾಯಕ್ಕರು ಕನ್ನಡದಲ್ಲಿ ಗಜಲ್ ರಚಿಸಿ ಹೊಸ ಸಾಧ್ಯತೆಗಳನ್ನು ಪರಿಚಯಿಸಿದ್ದಾರೆ. ಆಧ್ಯಾತ್ಮ, ಪ್ರಕೃತಿ, ಪ್ರೀತಿ, ಪ್ರಚಲಿತ ವಿಷಯಗಳನ್ನು ಆಧರಿಸಿ ಗಜಲ್‌ಗಳ ರಚನೆ ಸಾಗಿದೆ. ಹೊಸ ತಲೆಮಾರಿನ ಕವಿಗಳು ಕೂಡಾ ಗಜಲ್ ರಚನೆಯಲ್ಲಿ ತೊಡಗಿರುವದು ಸಾಹಿತ್ಯದ ಬೆಳವಣಿಗೆ ದೃಷ್ಟಿಯಿಂದ ಗಮನಾರ್ಹವಾದುದು ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಜಿಲ್ಲೆಯಲ್ಲಿ ಅನೇಕರು ಸಾಹಿತ್ಯಿಕ ಹಿನ್ನೆಲೆಯಲ್ಲಿ ಸಂಶೋಧನೆಯನ್ನು ಮಾಡಿ ಮಹಾಪ್ರಬಂಧವನ್ನು ರಚಿಸಿದ್ದಾರೆ. ಅವುಗಳ ಕುರಿತು ಸಹೃದಯರಿಗೆ ಪರಿಚಯಿಸುವ ಹಿನ್ನೆಲೆಯಲ್ಲಿ 'ಮಹಾ ಮಾತು' ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಕನ್ನಡ ಗಜಲ್‌ಗಳಲ್ಲಿ ವ್ಯಕ್ತಿ ಮತ್ತು ಅಭಿವ್ಯಕ್ತಿ ಕುರಿತು ಅಧ್ಯಯನ ಮಾಡಿ ವಿಶಿಷ್ಟ ಪ್ರಬಂಧವನ್ನು ವಿನಾಯಕ ಕಮತದ ಅವರು ಮಂಡಿಸಿದ್ದಾರೆ. ಅಲ್ಲದೇ ಮಕ್ಕಳ ಸಾಹಿತ್ಯದ ಬೆಳವಣಿಗೆ ಹಿನ್ನೆಲೆಯಲ್ಲಿಯೂ ಮಹತ್ವದ ಕೊಡುಗೆಯನ್ನು ನೀಡಿದ್ದಾರೆ ಎಂದು ತಿಳಿಸಿದರು.

ಡಿ.ಎಸ್. ಬಾಪುರಿ ಸ್ವಾಗತಿಸಿದರು. ರಾಹುಲ ಗಿಡ್ನಂದಿ ನಿರೂಪಿಸಿದರು. ಸತೀಶ ಚನ್ನಪ್ಪಗೌಡರ, ಕಿಶೋರಬಾಬು ನಾಗರಕಟ್ಟಿ, ಶಿಲ್ಪಾ ಮ್ಯಾಗೇರಿ, ಅಮರೇಶ ರಾಂಪೂರ, ಬಸವರಾಜ ಗಣಪ್ಪನವರ, ಬಿ.ಎಸ್. ಹಿಂಡಿ, ಶಕುಂತಲಾ ಗಿಡ್ನಂದಿ, ರಕ್ಷಿತಾ ಗಿಡ್ನಂದಿ, ಜೆ.ಎ. ಪಾಟೀಲ, ಶೇಖರಪ್ಪ ಕಳಸಾಪೂರ, ಶಾಂತಲಾ ಹಂಚಿನಾಳ, ಕೆ.ಜಿ. ವ್ಯಾಪಾರಿ ಮೊದಲಾದವರು ಕಾರ್ಯಕ್ರಮ ಭಾಗವಹಿಸಿದ್ದರು.

## ತ್ರಿಚಕ್ರ ವಾಹನ ವಿತರಿಸಿದ ಶಾಸಕ ಸಂಕನೂರ



**■ವಿಜಯಸಾಕ್ಷಿ ಸುದ್ದಿ, ಗದಗ**

ವಿಧಾನ ಪರಿಷತ್ ಶಾಸಕ ಎಸ್.ವಿ.ಸಂಕನೂರ ಅವರು ಗುರುವಾರ ನಗರದ ಜಿಲ್ಲಾಡಳಿತ ಭವನದ ಆವರಣದಲ್ಲಿ ವಿಕಲಚೇತನ ಇಬ್ಬರು ಫಲಾನುಭವಿಗಳಿಗೆ ತ್ರಿಚಕ್ರ ವಾಹನಗಳನ್ನು ವಿತರಣೆ ಮಾಡಿದರು.


ಸ್ಥಳೀಯ ಶಾಸಕರ ಪ್ರದೇಶಾಭಿವೃದ್ಧಿ ಯೋಜನೆಯ ಅನುದಾನದಡಿ ಖರೀದಿಸಲಾದ ಎರಡು ವಾಹನಗಳನ್ನು ವಿತರಿಸಿ ನಂತರ ಮಾತನಾಡಿದ ಅವರು, ವಿಕಲಚೇತನರು ತ್ರಿಚಕ್ರ ವಾಹನದ ಸದ್ಬಳಕೆ ಮಾಡಿಕೊಳ್ಳಬೇಕು. ಸರ್ಕಾರದ ಯೋಜನೆಗಳ ಸೌಲಭ್ಯಗಳನ್ನು ಅರ್ಹ ವಿಕಲಚೇತನರು ಪಡೆಯಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್.ಮುಂಡರಗಿ, ಅಂಗವಿಕಲರ ಕಲ್ಯಾಣಾಧಿಕಾರಿ ಮಹಾಂತೇಶ ಕೆ, ಗಣ್ಯರಾದ ರಾಜು ಕುರಡಗಿ, ಲಿಂಗರಾಜ ಪಾಟೀಲ, ಪ್ರಕಾಶ ಅಂಗಡಿ, ಸುರೇಶ ಮರಳಪ್ಪನವರ, ಬೂದಪ್ಪ ಹಳ್ಳಿ , ಇಲಾಖೆಯ ಸಿಬ್ಬಂದಿ ವರ್ಗ ಸೇರಿದಂತೆ ಇತರರು ಹಾಜರಿದ್ದರು.

## ನದಿ ಪಾತ್ರದ ಗ್ರಾಮಗಳಿಗೆ ಭೇಟಿ

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ತಾಲೂಕಿನಲ್ಲಿ ಹೆಚ್ಚಿನ ಮಳೆ ಸುರಿಯುತ್ತಿದ್ದು, ಜಿಲ್ಲಾಧಿಕಾರಿಗಳ ನಿರ್ದೇಶನದ ಮೇರೆಗೆ ಗುರುವಾರ ತಹಸೀಲ್ದಾರ ಅನಿಲ ಬಡಿಗೇರ ತಾಲೂಕಿನ ನದಿ ಪಾತ್ರದಲ್ಲಿರುವ ಗ್ರಾಮಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.



ನಂತರ ಪತ್ರಿಕೆಯೊಂದಿಗೆ ಮಾತನಾಡಿದ ಅವರು, ಜಿಲ್ಲಾಧಿಕಾರಿ ನಿರ್ದೇಶನದಂತೆ ನದಿ ಪಾತ್ರದ ಗ್ರಾಮಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಾಗುತ್ತಿದ್ದು, ತಾಲೂಕಿನ ಹೊಳೆ-ಇಟಗಿ, ತೊಳಲಿ, ಕಲ್ಲಾಗನೂರ ಮತ್ತು ಸಾಸರವಾಡ ಗ್ರಾಮಗಳಿಗೆ ಭೇಟಿ ನೀಡಿ ಸಾರ್ವಜನಿಕರಿಗೆ ನದಿ ಪಾತ್ರದ ಕಡೆಗೆ ತೆರಳದಂತೆ ಸೂಚನೆ ನೀಡಲಾಗಿದೆ. ಅವಶ್ಯಕತೆ ಬಿದ್ದಲ್ಲಿ ಕಾಳಜಿ ಕೇಂದ್ರವನ್ನು ತೆರೆಯುವುದಕ್ಕಾಗಿ ಸ್ಥಳಗಳನ್ನು ಗುರುತಿಸಲಾಗಿದೆ. ಕಾಳಜಿ ಕೇಂದ್ರಗಳ ನೋಡಲ್ ಅಧಿಕಾರಿಗಳನ್ನಾಗಿ ಹೊಳೆ-ಇಟಗಿ ಗ್ರಾಮಕ್ಕೆ ಗೋಪಾಲ ಲಮಾಣಿ-ಸಮಾಜ ಕಲ್ಯಾಣಾಧಿಕಾರಿ, ಸಾಸಲವಾಡ ಗ್ರಾಮಕ್ಕೆ ರೇವಣೆಪ್ಪ ಮನಗೂಳಿ-ಸಹಾಯಕ ಕೃಷಿ ನಿರ್ದೇಶಕ, ತೊಳಲಿ ಗ್ರಾಮಕ್ಕೆ ಮಲ್ಲಿಕಾರ್ಜುನ ಪಾಟೀಲ-ಎಇಇ ಪಿಡಬ್ಲ್ಯುಡಿ, ಕಲ್ಲಿಗನೂರ ಗ್ರಾಮಕ್ಕೆ ನಿಂಗಪ್ಪ ಓಲೇಕಾರ-ಸಹಾಯಕ ನಿರ್ದೇಶಕ ಪಶು ಸಂಗೋಪನೆ ಇವರುಗಳು ನೇಮಕವಾಗಿದ್ದಾರೆ.

ಅತೀ ಮಳೆಯಿಂದ ಇಲ್ಲಿಯವರೆಗೂ ತಾಲೂಕಿನಲ್ಲಿ ಮನೆ ಹಾನಿ, ಜೀವಹಾನಿಯಾದ ಬಗ್ಗೆ ಯಾವುದೇ ವರದಿ ಆಗಿಲ್ಲವೆಂದು ತಿಳಿಸಿದರು. ಕಂದಾಯ ನಿರೀಕ್ಷಕ ಕಾತ್ರಾಳ ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಇಂದಿನ ನೀರು ಪೂರೈಕೆ ವಿವರ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಅವಳಿ ನಗರದಲ್ಲಿ ಜೂ :13 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

**ಸ್ಥಳಗಳ ವಿವರ:** ವಾರ್ಡ್ ನಂ. 7, 5 ಪಂಚಲಕ್ಷ್ಮಿ ಬಡಾವಣೆ, ರಂಗಪ್ಪಜ್ಜನ ಮಠ ಕೆಲವು ಉಳಿದ ಭಾಗಗಳು. ವಾರ್ಡ್ ನಂ. 11 ನಿಸರ್ಗ ಬಡಾವಣೆ 1ನೇ ಕ್ರಾಸ್, 2ನೇ ಕ್ರಾಸ್ ಹನುಮಂತ ದೇವರ ಗುಡಿ, ಗಣಪತಿಕಟ್ಟಿ, ರಿಂಗ್ ರೋಡ್, ಮಸೂತಿ ಲೈನ್ ಕೆಲವು ಭಾಗಗಳು, ವಾರ್ಡ್ ನಂ. 29 ರಾಜೀವ ಗಾಂಧಿ ನಗರ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 26 ಅಕ್ಕನಬಳಗ, ಕಲಾಮಂದಿರ, ಜೆ.ಟಿ.ಮಠ ರಸ್ತೆ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 21, 22, ವಿಜಯನಗರ ಶಾಲೆ, ಕಮತರ ಪ್ಲಾಟ್, ಕರುಗಲ್ ಲೇಔಟ್, ವಾಲ್ಮೀಕಿ ಭವನ, ಶಿಗ್ಗಾಂವಿ ಲೇಔಟ್, ಕೆಲವು ಭಾಗಗಳು.

**ವಿಶೇಷ ಪ್ರಕಟಣೆ:** ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ತಿಳಿಸಲಾಗಿದೆ. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಕ್ರಮ ವಲಸಿಗರ ಹೆಸರು ಎನ್‌ಆರ್‌ಸಿಯಲ್ಲಿದ್ದರೂ ಅವರನ್ನು ಗಡಿಪಾರು ಮಾಡುತ್ತೇವೆ: ಅಸ್ಸಾಂ ಸಿಎಂ

**■ವಿಜಯಸಾಕ್ಷಿ ಸುದ್ದಿ, ಅಸ್ಸಾಂ**

"ಅಕ್ರಮ ವಲಸಿಗರು" ಎಂದು ಹೇಳಲಾದವರನ್ನು ರಾಷ್ಟ್ರೀಯ ನಾಗರಿಕರ ನೋಂದಣಿಯಲ್ಲಿ ಹೆಸರಿಸಿದ್ದರೂ ಸಹ ಬಾಂಗ್ಲಾದೇಶಕ್ಕೆ "ಗಡಿಪಾರು" ಮಾಡಲಿದ್ದೇವೆ ಎಂದು ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಬುಧವಾರ ಹೇಳಿದ್ದಾರೆ. "ಅವರು ಅಕ್ರಮ ವಲಸಿಗರು ಎಂದು ನಮಗೆ ಖಚಿತವಾಗಿದ್ದರೆ, ನಾವು ಅವರನ್ನು ತಕ್ಷಣವೇ ಗಡಿಪಾರು ಮಾಲಿದ್ದೇವೆ" ಎಂದು ಮುಖ್ಯಮಂತ್ರಿ ಹೇಳಿದ್ದಾರೆ. ಅಕ್ರಮ ವಲಸಿಗರ ಹೆಸರು ಅಸ್ಸಾಂನಲ್ಲಿ ಭಾರತೀಯ ನಾಗರಿಕರನ್ನು ರಾಜ್ಯದಲ್ಲಿ ವಾಸಿಸುವ ದಾಖಲೆರಹಿತ ವಲಸಿಗರಿಂದ ಬೇರ್ಪಡಿಸುವ ಉದ್ದೇಶದಿಂದ ಆಗಸ್ಟ್ 2019 ರಲ್ಲಿ ರಾಷ್ಟ್ರೀಯ ನಾಗರಿಕರ ನೋಂದಣಿಯನ್ನು ಪ್ರಕಟಿಸಲಾಯಿತು. ಪಟ್ಟಿಯಲ್ಲಿ ಸೇರಿಸಬೇಕಾದರೆ ನಿವಾಸಿಗಳು ಮಾರ್ಚ್ 24, 1971 ರ ಮಧ್ಯರಾತ್ರಿಯ ಮೊದಲು ಅಸ್ಸಾಂಗೆ ಪ್ರವೇಶಿಸಿದ್ದಾರೆ ಎಂದು ಸಾಬೀತುಪಡಿಸಬೇಕಾಗಿತ್ತು.

## Bengaluru Stampede: ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗಕ್ಕೆ ಆರ್ ಅಶೋಕ್ ಪತ್ರ!

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಬೆಂಗಳೂರಿನಲ್ಲಿ ನಡೆದ ಕಾಲ್ತುಳಿತ ದುರಂತದಲ್ಲಿ ಸಂತ್ರಸ್ತರಿಗೆ ನ್ಯಾಯ ಒದಗಿಸಲು ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ ಮಧ್ಯಪ್ರವೇಶಿಸುವಂತೆ ಪ್ರತಿಪಕ್ಷ ನಾಯಕ ಆರ್.ಅಶೋಕ ಕೋರಿದ್ದಾರೆ. ಈ ಕುರಿತು ಅವರು ಆಯೋಗದ ಅಧ್ಯಕ್ಷರಿಗೆ ಪತ್ರ ಬರೆದಿದ್ದಾರೆ.

ಆರ್‌ಸಿಬಿ ಗೆಲುವಿನ ಸಂಭ್ರಮಾಚರಣೆಯ ದಿನದಂದು, ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕಾಲ್ತುಳಿತ ದುರಂತ ಸಂಭವಿಸಿ 11 ಯುವಕರು ಮೃತಪಟ್ಟಿದ್ದಾರೆ. 75 ಜನರು ತೀವ್ರವಾಗಿ ಗಾಯಗೊಂಡಿದ್ದಾರೆ. ಜನರ ಸುರಕ್ಷತೆಯ ವಿಚಾರದಲ್ಲಿ ರಾಜ್ಯ ಸರ್ಕಾರ ನಿರ್ಲಕ್ಷ್ಯ ತೋರಿದೆ ಹಾಗೂ ಈ ಕಾರ್ಯಕ್ರಮವನ್ನು ಸರಿಯಾಗಿ ನಿರ್ವಹಣೆ ಮಾಡಿಲ್ಲ ಎಂಬುದು ಕಂಡು ಬಂದಿದೆ ಎಂದು ಆರ್. ಅಶೋಕ ಪತ್ರದಲ್ಲಿ ದೂರಿದ್ದಾರೆ.

ಚಿನ್ನಸ್ವಾಮಿ ಕ್ರೀಡಾಂಗಣಕ್ಕೆ 35 ಸಾವಿರ ಜನರು ಹೋಗಬಹುದು. ಆದರೆ ಉಚಿತ ಪಾಸ್ ಹಾಗೂ ತಪ್ಪಾದ ಘೋಷಣೆ/ಪ್ರಕಟಣೆಗಳಿಂದಾಗಿ ಅತ್ಯಧಿಕ ಸಂಖ್ಯೆಯಲ್ಲಿ ಜನರು ಬಂದು ಕ್ರೀಡಾಂಗಣಕ್ಕೆ ನುಗ್ಗಿದ್ದಾರೆ. ಇಂತಹ ಬೃಹತ್ ಕಾರ್ಯಕ್ರಮದಲ್ಲಿ ಪೊಲೀಸ್ ಹಾಗೂ ಭದ್ರತಾ ಸಿಬ್ಬಂದಿಯ ಕೊರತೆ ಕೂಡ ಇತ್ತು.

# ಕೆರೆ ಅಭಿವೃದ್ಧಿಗೆ ಚಾಲನೆ



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಸ್ಥಳೀಯ ಪ.ಪಂ ವ್ಯಾಪ್ತಿಯ ಶೀತಾಲಹರಿ ಗ್ರಾಮದ ಗೌಡನಕೆರೆ ಅಭಿವೃದ್ಧಿಗೆ ಚಾಲನೆ ನೀಡಲಾಯಿತು.

ಕಾಮಗಾರಿಗೆ ಚಾಲನೆ ನೀಡಿದ ಮುಳಗುಂದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಸವರಾಜ ಸುಂಕಾಪುರ ಮಾತನಾಡಿ, ಪ.ಪಂ ವ್ಯಾಪ್ತಿಯ ಶೀತಾಲಹರಿ ಗ್ರಾಮದ ಗೌಡನಕೆರೆ ಅಭಿವೃದ್ಧಿಗೆ ಇಂದು ಚಾಲನೆ ನೀಡಲಾಗಿದ್ದು, ಸಣ್ಣ ನೀರಾವರಿ ಇಲಾಖೆಯಿಂದ ಅಂದಾಜು 2 ಕೋಟಿ ವೆಚ್ಚದಲ್ಲಿ ಮಲ್ಲಸಮುದ್ರ ಕೆರೆ, ಹುಲಕೋಟಿ ಕೆರೆ ಹಾಗೂ ಶೀತಾಲಹರಿ ಗೌಡನ ಕೆರೆ ಅಭಿವೃದ್ಧಿ ಮಾಡಲಾಗುತ್ತಿದೆ. ಅದರಲ್ಲಿ ಅಂದಾಜು 40 ಲಕ್ಷ ವೆಚ್ಚದಲ್ಲಿ ಗೌಡನಕೆರೆಯ ಅಭಿವೃದ್ಧಿ ಮಾಡಲಾಗುತ್ತಿದೆ. ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರು ರೈತಪರ ಯೋಜನೆಯನ್ನು ತಂದಿದ್ದು, ಇದರಿಂದ ಈ ಭಾಗದ ರೈತರಿಗೆ ಅನುಕೂಲವಾಗಲಿದೆ. ಕೆರೆಯ ಹೂಳು ಎತ್ತಿ, ಕೆರೆಯಲ್ಲಿ ಬೆಳೆದುನಿಂತ ಕಸ, ಕಂಟಿಗಳನ್ನ ತೆರವುಗೊಳಿಸಿ, ಕೆರೆಯ ರಸ್ತೆ ಪಕ್ಕದ ಭಾಗದಲ್ಲಿ 460 ಮೀ ತಂತಿ ಬೇಲಿಯನ್ನು ಅಳವಡಿಸುವ ಕಾಮಗಾರಿ ಇದಾಗಿದೆ. ಕೆರೆಯ ಅಭಿವೃದ್ಧಿ ಕಾಮಗಾರಿ ಗುಣಮಟ್ಟದಿಂದ ಕೂಡಿರಬೇಕು ಎಂದು ಗುತ್ತಿಗೆದಾರರಲ್ಲಿ ಮನವಿ ಮಾಡಿದರು.

ಈ ವೇಳೆ ಹೊನ್ನಪ್ಪ ಜೋಗಿ, ಫಕ್ಕೀರಪ್ಪ ಜೋಗಿ, ರುದ್ರಪ್ಪ ಲಕ್ಷ್ಮಣಗೌಡ, ಮಲ್ಲೇಶ ನೀಲಗುಂದ, ವಿರೂಪಾಕ್ಷಪ್ಪ ನಾಯಕರ, ಮುತ್ತಪ್ಪ ಡೊಳ್ಳಿನ, ಯಲ್ಲಪ್ಪ ಕಲಾದಗಿ, ಗುತ್ತಿಗೆದಾರ ಆಕಾಶ ಸೇರಿದಂತೆ ಇತರರು ಇದ್ದರು.

### ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ ಕಾರ್ಯಕ್ರಮದಲ್ಲಿ ದಿವಾಣಿ ನ್ಯಾಯಾಧೀಶ ಸಿ.ಎಸ್. ಶಿವನಗೌಡ್ರ

# ಮಕ್ಕಳಿಗೆ ಶಿಕ್ಷಣ ಸಾಂವಿಧಾನಿಕ ಹಕ್ಕು

**■ವಿಜಯಸಾಕ್ಷಿ ಸುದ್ದಿ, ಗದಗ**

ಬಾಲ ಕಾರ್ಮಿಕ ಪದ್ಧತಿಯ ದುಷ್ಪರಿಣಾಮದ ಕುರಿತು ಮಕ್ಕಳಲ್ಲಿ ಹಾಗೂ ಪೋಷಕರಲ್ಲಿ ಅರಿವು ಮೂಡಿಸಿ ಈ ಪದ್ಧತಿಯನ್ನು ನಿರ್ಮೂಲನೆ ಮಾಡಬೇಕು ಎಂದು ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಗುರುವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲ ಕಾರ್ಮಿಕ ನಿರ್ಮೂಲನಾ ಯೋಜನಾ ಸೊಸೈಟಿ ಗದಗ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಶಿಕ್ಷಣ ಇಲಾಖೆ, ಪದವಿಪೂರ್ವ ಶಿಕ್ಷಣ ಇಲಾಖೆ ಗದಗ ಹಾಗೂ ವಿವಿಧ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕುಟುಂಬದಲ್ಲಿನ ಬಡತನ, ಅನಕ್ಷರತೆ, ಶಿಕ್ಷಣದ ಮಹತ್ವದ ಕುರಿತು ಅರಿವಿಲ್ಲದಿರುವುದು, ವಲಸೆ



ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಬಾಲ ಕಾರ್ಮಿಕ ವಿರೋಧಿ ಪ್ರಮಾಣವಚನ ಬೋಧಿಸಿ ಮಾತನಾಡಿ, ಬಾಲ ಕಾರ್ಮಿಕತೆಗೆ ಅಸಹಾಯಕತೆ ಮುಖ್ಯ ಕಾರಣವಾಗಿದೆ. ಈ ಬಗ್ಗೆ ಮಕ್ಕಳಲ್ಲಿ ಅರಿವು ಮೂಡಿಸಿ ಅನ್ಯಾಯದ ವಿರುದ್ಧ ಹೋರಾಡುವ ಶಕ್ತಿ ಬೆಳೆಸಬೇಕು. ಸರ್ಕಾರವು ಮಕ್ಕಳ ಸುರಕ್ಷತೆ ಹಾಗೂ ಶ್ರೇಯೋಭಿವೃದ್ಧಿಗಾಗಿ ಹಲವಾರು ಸೌಲಭ್ಯಗಳನ್ನು ಜಾರಿಗೆ ತಂದಿದೆ. ಬಾಲ ಕಾರ್ಮಿಕತೆ ಕುರಿತು ನಮ್ಮ ಸುತ್ತಮುತ್ತಲಿನ ಪ್ರದೇಶದಲ್ಲಿರುವವರಿಗೆ ಅರಿವು ಮೂಡಿಸಬೇಕು. ಬಾಲ ಕಾರ್ಮಿಕರು ಕಂಡುಬಂದಲ್ಲಿ ಸಹಾಯವಾಣಿ ಸಂಖ್ಯೆ-1098ಗೆ ಕರೆ ಮಾಡಬೇಕು ಎಂದರು.

ಹೋಗುವುದು, ತೀವ್ರತರಹದ ಕಾಯಿಲೆಯಿಂದ ಬಳಲುತ್ತಿರುವ ಪೋಷಕರು, ಅಸ್ಪೃಶ್ಯತೆ ಹೀಗೆ ಅನೇಕ ಕಾರಣಗಳಿಂದ ಮಕ್ಕಳು ಶಾಲೆಗೆ ಹೋಗದೇ ಕೆಲಸಕ್ಕೆ ಹೋಗಿ ಬಾಲಕಾರ್ಮಿಕರಾಗುತ್ತಾರೆ. ಮಕ್ಕಳ ರಕ್ಷಣೆ ಒದಗಿಸುವುದು ಹಾಗೂ ಕಡ್ಡಾಯವಾಗಿ ಶಿಕ್ಷಣ ಒದಗಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ. ಮಕ್ಕಳಿಗೆ ಶಿಕ್ಷಣ ಒದಗಿಸುವುದು ಸಾಂವಿಧಾನಿಕ ಹಕ್ಕು. ಮಕ್ಕಳಿಗೆ ಅವರ ಹಕ್ಕುಗಳ ಕುರಿತು ತಿಳುವಳಿಕೆ ನೀಡಬೇಕು. ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆಯ ಕಾರ್ಮಿಕ ಪದ್ಧತಿಯ ಮಕ್ಕಳನ್ನು ದೈಹಿಕವಾಗಿ, ಮಾನಸಿಕವಾಗಿ ಹಾಗೂ ಆರ್ಥಿಕವಾಗಿ ಶೋಷಣೆಗೆ ಒಳಪಡಿಸಿ ಅವರ ಶಿಕ್ಷಣ ಹಾಗೂ ಸರ್ವಾಂಗೀಣ ಪ್ರಗತಿಯ ಅವಕಾಶಗಳನ್ನು ತಡೆಗಟ್ಟುತ್ತದೆ ಎಂದರು.

ಜಿಲ್ಲಾ ವಕೀಲರ ಸಂಘದ ಕಾರ್ಯದರ್ಶಿ ಎಂ.ಎ. ನಾಯಕ ಮಾತನಾಡಿ, ಪ್ರತಿ ಮಗುವಿಗೂ ಕಡ್ಡಾಯ ಶಿಕ್ಷಣ ಒದಗಿಸಬೇಕು. ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಪ್ರತಿಯೊಬ್ಬರೂ ಶ್ರಮಿಸಬೇಕು. ಮಕ್ಕಳಿಗೆ ಉದ್ಯೋಗ ಆಧಾರಿತ ಶಿಕ್ಷಣ ರೂಢಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಡಿಎಸ್‌ಪಿ ಮುರ್ತುಜಾ ಖಾದ್ರಿ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ಜಯದೇವಿ ಕವಲೂರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಮೆಹಬೂಬ ತುಂಬರಮಟ್ಟಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಪದ್ಮಾವತಿ ಜಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಮಡ್ಲೂರ, ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾರಿ ರಫೀಕಾ ಹಳ್ಳೂರ, ಕಾರ್ಮಿಕ ನಿರೀಕ್ಷಕರು ಸೇರಿದಂತೆ ಶಾಸ್ತ್ರೀಜಿ, ಸಿಡಿಓ, ಬಸವೇಶ್ವರ ಪ್ರೌಢಶಾಲೆಯ ವಿದ್ಯಾರ್ಥಿಗಳು, ವಿವಿಧ ಇಲಾಖೆಯ ಅಧಿಕಾರಿ-ಸಿಬ್ಬಂದಿಗಳು ಹಾಜರಿದ್ದರು.

ಜಿಲ್ಲಾ ಕಾರ್ಮಿಕ ಇಲಾಖೆಯ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಜಿಲ್ಲಾ ಬಾಲ ಕಾರ್ಮಿಕ ನಿರ್ಮೂಲನಾ ಯೋಜನಾ ಸೊಸೈಟಿಯ ಯೋಜನಾ ನಿರ್ದೇಶಕ ಸಂದೇಶ ಪಾಟೀಲ ಸ್ವಾಗತಿಸಿದರು. ಎಂ.ಎ. ಯರಗುಡಿ ಕಾರ್ಯಕ್ರಮ ನಿರೂಪಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka